ಸಂಪುಟ : 9 ಸಂಚಿಕೆ 199 ಪುಟ : 4 ಬೆಲೆ: 3.00 ರವಿವಾರ ಸೆಪ್ಟೆಂಬರ್ 15 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 9 Issue : 199 Pages : 4 Price : 3.00 Sunday september 15 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ. ಪಾಟೀಲ ಜಿಲ್ಲಾ ಪ್ರವಾಸ



■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರ ಸೆಪ್ಟೆಂಬರ್ 15 ರ ಗದಗ ಜಿಲ್ಲಾ ಪ್ರವಾಸದ ವಿವರ ಇಂತಿದೆ.

ಬೆಳಿಗ್ಗೆ 9 ಗಂಟೆಗೆ ಮುಂಡರಗಿಗೆ ಆಗಮಿಸಿ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸುವರು.

ಬೆಳಿಗ್ಗೆ11 ಗಂಟೆಗೆ ಗದಗ ವೈದ್ಯಕೀಯ ವಿಜ್ಞಾನಗಳ ಬೋಧಕ ಆಸ್ಪತ್ರೆ ಆವರಣ, ಮಲ್ಲಸಮುದ್ರದಲ್ಲಿ 50 ಹಾಸಿಗೆಗಳ ತೀವ್ರ ನಿಗಾ ಘಟಕ ಮತ್ತು ಜಿಲ್ಲಾ ಸಮಗ್ರ ಸಾರ್ವಜನಿಕ ಆರೋಗ್ಯ ಪ್ರಯೋಗಾಲಯ ಕಟ್ಟಡ ಕಾಮಗಾರಿಗಳ ಶಿಲಾನ್ಯಾಸ ಹಾಗೂ ಅತ್ಯಾಧುನಿಕ ಆಂಬ್ಯುಲೆನ್ಸ್ ಲೋಕಾರ್ಪಣೆ ಮತ್ತು ನೂತನ ಡಯಾಲಿಸಿಸ್ ಘಟಕ ಉದ್ಘಾಟನೆ ಸಮಾರಂಭದಲ್ಲಿ ಪಾಲ್ಗೊಳ್ಳುವರು.

ಬೆಳಿಗ್ಗೆ 11.45 ಗಂಟೆಗೆ ಗದಗದಲ್ಲಿನ ಜೆ.ಟಿ ಮಠ ರಸ್ತೆ, ದೇಸಾಯಿ ಕಾಂಪ್ಲೆಕ್ಸ್, ವಿಜಯಾ ಬ್ಯಾಂಕ್ ಎದುರಿಗೆ ಚಕ್ರವರ್ತಿ ದಿನಪತ್ರಿಕೆಯ 5ನೇ ವರ್ಷದ ವಾರ್ಷಿಕೋತ್ಸವ ಸಮಾರಂಭದಲ್ಲಿ ಪಾಲ್ಗೊಳ್ಳುವರು.

ಮಧ್ಯಾಹ್ನ 12.30 ಗಂಟೆಗೆ ಗದಗದಲ್ಲಿನ ಜಿ.ಎನ್.ಟಿ.ಟಿ.ಎಫ್ ಆವರಣದಲ್ಲಿರುವ ಇಂಜಿನಿಯರ್ಸ್ ದಿನಾಚರಣೆ ಹಾಗೂ ಜಿಎನ್‌ಟಿಟಿಎಫ್‌ನ 1ನೇ ವರ್ಷದ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸುವರು.

ಸಂಜೆ 4.00 ಗಂಟೆಗೆ ಹುಬ್ಬಳ್ಳಿಯ ಕೆ.ಎಲ್.ಇ ಟೆಕ್ ಆಡಿಟೋರಿಯಂ ಹಾಲ್ ಬಿವಿಬಿ ಕ್ಯಾಂಪಸ್ ನಲ್ಲಿರುವ ಇಂಜಿನಿಯರ್ಸ್ ದಿನಾಚರಣೆ ಕಾರ್ಯಕ್ರಮ ಪಾಲ್ಗೊಂಡು ಹುಬ್ಬಳ್ಳಿಯಲ್ಲಿ ವಾಸ್ತವ್ಯ ಮಾಡುವರು ಎಂದು ಸಚಿವರ ಕಾರ್ಯಾಲಯದ ಪ್ರಕಟಣೆಯಲ್ಲಿ ತಿಳಿಸಿದೆ.

ಬಿಎಎಂಎಸ್ ವಿದ್ಯಾರ್ಥಿಗಳ ಸಾಧನೆ

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಪಟ್ಟಣದ ಭಗವಾನ್ ಮಹಾವೀರ ಜೈನ್ ಆಯುರ್ವೇದಿಕ್ ಮೆಡಿಕಲ್ ಕಾಲೇಜಿನ ಪ್ರಥಮ ವರ್ಷದ ಬಿಎಎಂಎಸ್ ವಿದ್ಯಾರ್ಥಿಗಳು ಇತ್ತೀಚೆಗೆ ರಾಜೀವ ಗಾಂಧಿ ಆರೋಗ್ಯ ವಿಶ್ವವಿದ್ಯಾಲಯ ಬೆಂಗಳೂರು ವತಿಯಿಂದ ನಡೆದ ಪ್ರಥಮ ವರ್ಷದ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದ್ದಾರೆ ಎಂದು ಸಂಸ್ಥೆಯ ಕಾರ್ಯದರ್ಶಿ ಅಜಿತ ಕುಮಾರ ಬಾಗಮಾರ ಪ್ರಕಣೆಯಲ್ಲಿ ತಿಳಿಸಿದ್ದಾರೆ.

ವಿದ್ಯಾರ್ಥಿಗಳಾದ ರಕ್ಷತಾ ಶೇ.79.70, ಅನಿಷಾ ರಾಜೇಸಾಬ ಕೊಂಡಿ ಶೇ.78.23, ಕೋಮಲ ಪವಾರ ಶೇ.77.82, ರಶ್ಮಿ ಹಿರೇಮಠ ಶೇ.77.41, ನಿವೇದಿತಾ ಇಬ್ಬಕ್ಕನವರ್ ಶೇ.76.11, ವಿಜಯಶ್ರೀ ಜಿ.ಕೆ. ಶೇ.75.76 ಹಾಗೂ ಮೇಘನಾ ಪವಾರ ಶೇ.75.35 ಅಂಕ ಪಡೆದು ಕಾಲೇಜಿಗೆ ಕೀರ್ತಿ ತಂದಿದ್ದಾರೆ.

ಪರೀಕ್ಷೆಯಲ್ಲಿ ಏಳು ವಿದ್ಯಾರ್ಥಿಗಳು ಡಿಸ್ಟಿಂಕ್ಷನ್ ಪಡೆಯುವ ಮೂಲಕ ಸಾಧನೆ ಮಾಡಿದ್ದು, 13 ವಿದ್ಯಾರ್ಥಿಗಳು ಪ್ರಥಮ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದಾರೆ. ಈ ಯಶಸ್ಸು ಮಹಾವಿದ್ಯಾಲಯ ಸಿಬ್ಬಂದಿ ವರ್ಗದ ಶ್ರಮದ ಫಲ ಎಂದು ಬಾಗಮಾರ ತಿಳಿಸಿದ್ದಾರೆ. ಕಾಲೇಜಿನ ಪ್ರಾಚಾರ್ಯ ಮತ್ತು ಸಿಬ್ಬಂದಿಗಳು ವಿದ್ಯಾರ್ಥಿಗಳ ಸಾಧನೆಗೆ ಹರ್ಷ ವ್ಯಕ್ತಪಡಿಸಿದ್ದಾರೆ.

ಸಿದ್ದರಾಮಯ್ಯ ಬಗ್ಗೆ ಮಾತಾಡೋ ಯೋಗ್ಯತೆ ಕುಮಾರಸ್ವಾಮಿಗಿಲ್ಲ: ಚೆಲುವರಾಯಸ್ವಾಮಿ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಸಿದ್ದರಾಮಯ್ಯ ಬಗ್ಗೆ ಮಾತಾಡೋ ಯೋಗ್ಯತೆ ಕುಮಾರಸ್ವಾಮಿಗಿಲ್ಲ ಎಂದು ಸಚಿವ ಚಲುವರಾಯಸ್ವಾಮಿ ಹೇಳಿದ್ದಾರೆ.

ಈ ಸಂಬಂಧ ಮಾತನಾಡಿದ ಅವರು, ಕೇಂದ್ರ ಸಚಿವರಾದ ಹೆಚ್ಡಿ ಕುಮಾರಸ್ವಾಮಿ ಮಂಡ್ಯ ಕ್ಷೇತ್ರದಲ್ಲಿ ಸಂಸದರಾಗಿ ಆಯ್ಕೆಯಾದವರು. ಅವರ ಟೀಕೆ- ಟಿಪ್ಪಣಿಗಳನ್ನು ನೋಡುತ್ತಾ ಇರುತ್ತೀರಿ. ಒಬ್ಬ ಮಾಜಿ ಸಿಎಂ ಹೇಗೆ ಮಾತಾಡಬೇಕು ಎಂಬುದು ಅವರಿಗೆ ಗೊತ್ತಿಲ್ಲ.

ಸಿದ್ದರಾಮಯ್ಯನವರ ಚರಿತ್ರೆ, ನಾಯಕತ್ವ, ಆಡಳಿತವನ್ನು ಪ್ರಶ್ನೆ ಮಾಡುವ ಅರ್ಹತೆ ಕುಮಾರಸ್ವಾಮಿಯವರಿಗೆ ಇಲ್ಲ. ಗ್ರಾಮಗಳಲ್ಲೂ ನೂರಕ್ಕೆ ನೂರರಷ್ಟು 5 ಗ್ಯಾರಂಟಿ ನೀಡಲಾಗುತ್ತಿದೆ. ಅಲ್ಲಿ ಮುಸ್ಲಿಮರು, ಒಕ್ಕಲಿಗರು, ಬೇರೆ ಪಂಗಡದವರೂ ಅಂತ ಕೊಡುತ್ತಾ ಇದ್ದಾರಾ? ಅವರ ತಟ್ಟೆಯಲ್ಲಿ ಹೆಗ್ಗಣ ಬಿದ್ದಿದೆ, ಆದರೆ ಪಕ್ಕದ ತಟ್ಟೆ ನೋಡ್ತಾರೆ. ಇದೆಲ್ಲಾ ಮಾತಾಡೋದಕ್ಕೆ ಅವಕಾಶ ಮಾಡಿ ಕೊಟ್ಟಿದ್ದೇ ನೀವು.

ಅದಕ್ಕೆ ಅವರು ಬಂದು ಮಾತಾಡ್ತಾ ಇದ್ದಾರೆ ಎಂದು ಕೃಷಿ ಸಚಿವ ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಚೆಲುವರಾಯಸ್ವಾಮಿ ಹೇಳಿದ್ದಾರೆ.

ಸಿದ್ದರಾಮಯ್ಯ ಬೇರೆ ಜಿಲ್ಲೆಗೆ ಗಮನ ಹರಿಸುತ್ತಾರೋ ಇಲ್ಲವೋ ಗೊತ್ತಿಲ್ಲ. ಆದರೆ, ಮಂಡ್ಯ ಜಿಲ್ಲೆಯ ಪ್ರತಿ ಕಾರ್ಯಕ್ರಮಕ್ಕೂ ಬರುತ್ತಾರೆ. ಮೊನ್ನೆ ನನ್ನನ್ನು ಅಮೆರಿಕಾಕ್ಕೆ ಕಳಿಸಿದ್ದರು. ಇಳುವರಿ ಬಗ್ಗೆ ಅಧ್ಯಯನ ಮಾಡೋದಕ್ಕೆ ನಾವು ಹೋಗಿದ್ದೆವು. ನೀವೆಲ್ಲಾ ನೀರು ಜಾಸ್ತಿ ಕೊಟ್ಟರೆ ಜಾಸ್ತಿ ಇಳುವರಿ ಬರುತ್ತೆ ಅಂತ ತಿಳಿದುಕೊಂಡಿದ್ದೀರಿ. ಆದರೆ ಆ ಥರ ಇಲ್ಲ. ಮಣ್ಣಿನ ಪರೀಕ್ಷೆ ಮಾಡಬೇಕು ಎಂದು ಚೆಲುವರಾಯಸ್ವಾಮಿ ಹೇಳಿದ್ದಾರೆ.

ಅರ್ಥಪೂರ್ಣ ಪೈಗಂಬರ್ ಜಯಂತಿ ಆಚರಣೆ: ಬಾಷಾಸಾಬ ಮಲ್ಲಸಮುದ್ರ ಮಾಹಿತಿ

ಸರ್ವಧರ್ಮೀಯರು ಸಹಕಾರ ನೀಡಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಈದ್ ಮಿಲಾದ್ ಕಮಿಟಿ ಹಾಗೂ ಮುಹಮ್ಮದ್ ಪೈಗಂಬರ್ ಸಮಿತಿ ವತಿಯಿಂದ ಸೆಪ್ಟೆಂಬರ್ 16ರಂದು ಬೆಳಿಗ್ಗೆ 10 ಗಂಟೆಗೆ ನಗರದ ಉರ್ದು ಸೆಂಟ್ರಲ್ ಸ್ಕೂಲ್ ಮೈದಾನದಲ್ಲಿ ಈದ್ ಮಿಲಾದ್ ಹಬ್ಬವನ್ನು ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಕಮಿಟಿ ಅಧ್ಯಕ್ಷ ಬಾಷಾಸಾಬ ಮಲ್ಲಸಮುದ್ರ ಹೇಳಿದರು.

ಶನಿವಾರ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಮಹಮ್ಮದ್ ಪೈಗಂಬರ್ ಲೋಕದಿಂದ ತೃಜಿಸಿದ ದಿನ ಇದಾಗಿದ್ದು, ಇದೇ ದಿನ ಅವರ ಜನನ ಕೂಡ ಆಗಿರುತ್ತದೆ. ಈ ಹಿನ್ನೆಲೆಯಲ್ಲಿ ಪ್ರವಾದಿಗಳ ಜೀವನವನ್ನು ಸಮಾಜಕ್ಕೆ ತಿಳಿಸುವ ಉದ್ದೇಶವನ್ನು ನಮ್ಮ ಕಮಿಟಿ ಹೊಂದಿದ್ದು, ಪೈಗಂಬರ್ ಜಯಂತಿಯನ್ನು ಎಲ್ಲರೂ ಸೇರಿ ಆಚರಿಸೋಣ. ಮುಸಲ್ಮಾನ ಬಾಂಧವರು ಪ್ರತಿ ಏರಿಯಾದಲ್ಲಿ ಅನ್ನ ಸಂತರ್ಪಣೆಯನ್ನು ಆಯೋಜಿಸಲು ತಿರ್ಮಾನಿಸಿದ್ದಾರೆ. ಈ ಕಾರ್ಯಕ್ರಮಕ್ಕೆ ಸರ್ವಧರ್ಮದವರು ಸಹಾಕಾರ ನೀಡಬೇಕು ಎಂದು ವಿನಂತಿಸಿದರು.

ಕಾರ್ಯಕ್ರಮದ ನೇತೃತ್ವವನ್ನು ಮೌಲಾನಾ ಇನಾಯತುಲ್ಲಾ ಪಿರ್ಜಾದೆ ವಹಿಸಿಕೊಳ್ಳುವರು. ಮುಫ್ತಿ ಶಬ್ಬಿರಅಹ್ಮದ ಬೂದ್ಲೇಖಾನ್ ಕಾರ್ಯಕ್ರಮದ ಪ್ರಾರ್ಥನೆ ಸಲ್ಲಿಸಲಿದ್ದಾರೆ. ಸಾನ್ನಿಧ್ಯವನ್ನು ಜಗದ್ಗುರು ತೋಂಟದಾರ್ಯ ಮಠದ ಪೀಠಾಧಿಪತಿ ಡಾ. ಸಿದ್ದರಾಮ ಮಹಾಸ್ವಾಮೀಜಿಗಳು ವಹಿಸಿಕೊಳ್ಳಲಿದ್ದು, ಮೌಲಾನ ನಿಜಾಮುದ್ದೀನ್ ಕಾಸ್ತಿ ಬೆಂಗಳೂರು ಇವರು ಪ್ರಾಸ್ತಾವಿಕವಾಗಿ ಮಾತನಾಡಲಿದ್ದಾರೆ. ಕಾರ್ಯಕ್ರಮವನ್ನು ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಉದ್ಘಾಟಿಸಲಿದ್ದು, ಮಂಗಳೂರಿನ ಮಹಮ್ಮದ ಇಸ್ಲಾಕ್ ಪುತ್ತೂರ ಅವರು ಪ್ರವಾದಿ ಮುಮಹ್ಮದ್ ಪೈಗಂಬರ್ ಅವರ ಜೀವನ ಚರಿತ್ರೆಯ ಬಗ್ಗೆ ಉಪನ್ಯಾಸ ನೀಡಲಿದ್ದಾರೆ ಎಂದು ವಿವರಿಸಿದರು.

ಸುದ್ದಿಗೋಷ್ಠಿಯಲ್ಲಿ ಯುಸೂಫ್ ಕೊಟ್ಟೂರ, ಶೌಕತ್ ಕಾತರಕಿ, ಆರೀಫ್ ಹುನಗುಂದ, ಜಾಕೀರ ನರಗುಂದ, ಕರಿಂಸಾಬ್ ಸುಣಗಾರ, ರಿಯಾಜಅಹ್ಮದ್ ಗುಡಿಸಲಮನಿ, ಅಕ್ಬರ್ ಅಲಿ ಅತ್ತಾರ್, ಶಬ್ಬೀರ್ ಧಾರವಾಡ, ಚಾಂದಸಾಬ್ ಕೊಟ್ಟೂರ, ಮಲ್ಲಿಕಜಾನ್ ಬಾಗಲಕೋಟಿ, ಸಮೀರ್ ಅಗಸನಹಳ್ಳಿ, ದಾದಾಪೀರ್ ಮುಂಡರಗಿ ಮುಂತಾದವರು ಹಾಜರಿದ್ದರು.

> ಈದ್ ಮಿಲಾದ್ ಅಂಗವಾಗಿ ಬಡ ವಿದ್ಯಾರ್ಥಿಗಳಿಗೆ 5 ಸಾವಿರ ನೋಟ್ ಬುಕ್ ವಿತರಣೆ, ಬಡ ಹೆಣ್ಣು ಮಕ್ಕಳಿಗೆ 250 ಸೀರೆಗಳ ವಿತರಣೆ, ವಿವಿಧ ಮದರಸಾಗಳಲ್ಲಿ ಓದುತ್ತಿರುವ 150 ಮಕ್ಕಳಿಗೆ ಬಟ್ಟೆ ವಿತರಣೆ, ರಕ್ತ ತಪಾಸಣೆ, ಅನ್ನ ಸಂತರ್ಪಣೆ ಕಾರ್ಯಕ್ರಮ ಸೇರಿದಂತೆ ಹಲವಾರು ಸಾಮಾಜಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ ಎಂದು ಬಾಷಾಸಾಬ ಮಲ್ಲಸಮುದ್ರ ಮಾಹಿತಿ ನೀಡಿದರು.

ಮಹಿಳೆಯರಿಂದ ಜೋಕುಮಾರ ಸ್ವಾಮಿಯ ವಿಶೇಷ ಪೂಜೆಯೊಂದಿಗೆ ವಿಶಿಷ್ಠ ಆಚರಣೆ

'ಜೋಕುಮಾರ ಬಂದಾನ ಬರ್ರೀ'

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಜೋಕುಮಾರ ಬಂದಾನವ್ವಾ ಜೋಕಮಾರ! ಜೋಳ ಹಾಕ್ರಿ ಎಂದು ಹಾಡುತ್ತಾ ಆಚರಿಸುವ ಈ ವಿಶಿಷ್ಟ ಹಬ್ಬವನ್ನು ಅನಂತನ ಹುಣ್ಣಿಮೆಯ ಮುಂಗಾರು ಸುಗ್ಗಿ ಮತ್ತು ಹಿಂಗಾರು ಬಿತ್ತನೆಯ ನಡುವೆ ಜೋಕಮಾರನ ಹಬ್ಬವನ್ನು ಸಂಭ್ರಮದಿಂದ ಆಚರಿಸುತ್ತಾರೆ.

ಚತುರ್ಥಿಯಲ್ಲಿ ಗಣೇಶ ಮಳೆಯನ್ನು ತರದಿದ್ದರೂ ಜೋಕಮಾರ ಸ್ವಾಮಿ ಮಳೆ ತರುತ್ತಾನೆ ಎನ್ನುವುದು ರೈತರ ನಂಬಿಕೆ. ಗ್ರಾಮೀಣ ಪ್ರದೇಶಗಳಲ್ಲಿ ವಿಶೇಷವಾಗಿ ಮಹಿಳೆಯರು ಮಣ್ಣಿನಿಂದ ಮಾಡಿದ ಜೋಕಮಾರನ ಮೂರ್ತಿಯನ್ನು ದವಸ ಧಾನ್ಯ ತುಂಬಿದ ಪುಟ್ಟಿಯಲ್ಲಿಟ್ಟುಕೊಂಡು ಜಾನಪದಗಳನ್ನು ಹಾಡುತ್ತಾ ಮನೆ-ಮನೆಗೆ ತೆರಳುವ ಮೂಲಕ ಗ್ರಾಮೀಣ ಮಹಿಳೆಯರು 'ಜೋಕುಮಾರ ಬಂದಾನ ಬರ್ರೀ' ಎಂದು ಪಟ್ಟಣ ಸೇರಿ ಗ್ರಾಮಗಳ ಬೀದಿ ಬೀದಿಗಳಲ್ಲಿ ಸಂಚರಿಸಿ, ಮನೆಯವರನ್ನು ಕರೆದು ಪೂಜೆ ಮಾಡುತ್ತಾರೆ.

ಪೂಜೆಯ ಸಂದರ್ಭದಲ್ಲಿ ಜೋಕುಮಾರನ ಕುರಿತು 'ತಿಂಗಳಿಗೊಮ್ಮೆ ಬರುವನಲ್ಲ ತಾಯವ್ವ, ತಂದು ನೀಡವ್ವ ಮರತುಂಬ' ಎಂದು ಜೋಕುಮಾರನನ್ನು ಹೊತ್ತು ತಂದ ಕೊಡಗಾನೂರ ಗ್ರಾಮದ ಬಾಳವ್ವ ತಳವಾರ, ರೇಣವ್ವ ತಳವಾರ, ಲಕ್ಷ್ಮವ್ವ ವಾಲ್ಮೀಕಿ, ಶರಣವ್ವ ವಾಲ್ಮೀಕಿ ಹಾಡು ಹೇಳುತ್ತಾರೆ.

ಕೈಯಲ್ಲಿ ಕತ್ತಿಯನ್ನು ಹಿಡಿದು, ಅಗಲವಾದ ಮುಖ, ಚೂಪಾದ ಮೂಗು, ಆಕರ್ಷಕ ಕಣ್ಣುಗಳಿಗೆ ತಕ್ಕಂತೆ ಹಣೆಗೆ ವಿಭೂತಿ, ಕುಂಕುಮ ಹಚ್ಚಿ, ತಲೆಗೆ ರುಮಾಲು ಸುತ್ತಿ ಅಲಂಕೃತಗೊಳಿಸಿದ ಜೋಕಮಾರನನ್ನು ಹೊತ್ತು ತರುವಾಗ ಹಿಂದೆ ಮಹಿಳೆಯರ ತಂಡವು ಜೋಕಮಾರ ಸ್ವಾಮಿಯ ಪೂಜೆಗಾಗಿ ಮನೆಯವರು ಮೊರದಲ್ಲಿ ಜೋಳ, ಗೋಧಿ, ಸಜ್ಜಿ, ಕಡಲೆ ಸೇರಿದಂತೆ ವಿವಿಧ ಧಾನ್ಯಗಳು, ಉಪ್ಪು ಮೆಣಸಿನಕಾಯಿ, ಕೊಬ್ಬರಿ ಬಟ್ಟಲು, ಎಲೆ-ಅಡಿಕೆ ಬುಟ್ಟಿಯಲ್ಲಿ ಹಾಕಿ ವಿಶೇಷ ಪೂಜೆ ಸಲ್ಲಿಸುತ್ತಾರೆ.

ಅದಕ್ಕೆ ಪ್ರತಿಯಾಗಿ ನುಚ್ಚನ್ನು ಪ್ರಸಾದದ ರೂಪದಲ್ಲಿ ನಂಬಿದ ಭಕ್ತರಿಗೆ ನೀಡುತ್ತಾರೆ. ಹೀಗೆ ಸ್ವಾಮಿಗೆ ಮೊರದಲ್ಲಿ ದವಸ ಧಾನ್ಯಗಳನ್ನು ಹಾಕಿ, ಆತನ ಬಾಯಿಗೆ ಬೆಣ್ಣೆ ಹಚ್ಚುತ್ತಾರೆ. ಜೋಕಮಾರನ ಬಾಯಿಗೆ ಸವರಿದ ಬೆಣ್ಣೆಯನ್ನು ಕಣ್ಣಿಗೆ ಹಚ್ಚಿಕೊಂಡರೆ ಕಣ್ಣು ಬೇನೆ ಬರುವುದಿಲ್ಲ ಎಂದು ಕೊಡಗಾನೂರ ಗ್ರಾಮದ ಶರಣವ್ವ ವಾಲ್ಮೀಕಿ ಕುಟುಂಬದ ಮಹಿಳೆಯರು ಹೇಳುತ್ತಾರೆ.

> ಗಣೇಶನ ವಿಸರ್ಜನೆಯ ಮರುದಿನವೇ ಈ ಹಬ್ಬ ಆಚರಿಸುವುದರಿಂದ ಜೋಕಮಾರಸ್ವಾಮಿಯ ಕಣ್ಣಿಗೆ ವಿನಾಯಕ ಕಾಣಬಾರದು ಎಂದುಕೊಂಡು ಮೂರ್ತಿಗೆ ಮರೆ ಮಾಡುತ್ತಾರೆ. ಅಲ್ಲಿಂದ ಮೂರು ದಿನಗಳ ಕಾಲ ಮಡಿವಾಳರು ಬಟ್ಟೆ ತೊಳೆಯುವ ಸ್ಥಳದಲ್ಲಿ ಹೋಗುವದಿಲ್ಲವಂತೆ. ಒಟ್ಟಾರೆ ಮಳೆ-ಬೆಳೆ ಸರಿಯಾಗಿ ಬರುತ್ತದೆ ಎಂಬ ನಂಬಿಕೆಯಿಂದ, ಶ್ರದ್ಧಾಭಕ್ತಿಯಿಂದ ಮಣ್ಣಿನ ಹಬ್ಬಗಳಿಗೆ ವಿಶೇಷ ಪೂಜೆ ಸಲ್ಲಿಸುತ್ತಾರೆ.

ಜಿಮ್ಸ್ ಕಟ್ಟಡ ಕಾಮಗಾರಿಗಳ ಶಿಲಾನ್ಯಾಸ ಹಾಗೂ ಅತ್ಯಾಧುನಿಕ ಅಂಬ್ಯುಲೆನ್ಸ್ ಲೋಕಾರ್ಪಣೆ

ನೂತನ ಡಯಾಲಿಸಿಸ್ ಘಟಕ ಉದ್ಘಾಟನೆ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ 50 ಹಾಸಿಗೆಗಳ ತೀವ್ರ ನಿಗಾ ಘಟಕ (Critical Care Unit)ಮತ್ತು ಜಿಲ್ಲಾ ಸಮಗ್ರ ಸಾರ್ವಜನಿಕ ಆರೋಗ್ಯ ಪ್ರಯೋಗಾಲಯ (District Integrated Public Health Laboratory) ಕಟ್ಟಡ ಕಾಮಗಾರಿಗಳ ಶಿಲಾನ್ಯಾಸ ಸಮಾರಂಭ, ಅತ್ಯಾಧುನಿಕ ಅಂಬ್ಯುಲೆನ್ಸ್ ಲೋಕಾರ್ಪಣೆ ಮತ್ತು ನೂತನ ಡಯಾಲಿಸಿಸ್ ಘಟಕ ಉದ್ಘಾಟನೆ ಸಮಾರಂಭವನ್ನು ಸಪ್ಟೆಂಬರ್ 15ರ ಬೆಳಿಗ್ಗೆ 10 ಗಂಟೆಗೆ ಗದಗ ವೈದ್ಯಕೀಯ ವಿಜ್ಞಾನಗಳ ಬೋಧಕ ಆಸ್ಪತ್ರೆ ಆವರಣ, ಮಲ್ಲಸಮುದ್ರದಲ್ಲಿ ಹಮ್ಮಿಕೊಳ್ಳಲಾಗಿದೆ.

ವಿ.ಪ ಸಭಾಪತಿ ಬಸವರಾಜ ಹೊರಟ್ಟಿ, ಸಚಿವ ಡಾ. ಶರಣಪ್ರಕಾಶ ಪಾಟೀಲ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು. ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್. ಕೆ. ಪಾಟೀಲ ಕಾರ್ಯಕ್ರಮವನ್ನು ಉದ್ಘಾಟಿಸುವರು.

ಮುಖ್ಯ ಅತಿಥಿಗಳಾಗಿ ಸಂಸದ ಬಸವರಾಜ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕ ಹಾಗೂ ವಿ.ಪ ಸದಸ್ಯ ಸಲೀಂ ಅಹ್ಮದ್, ಕರ್ನಾಟಕ ಖನಿಜ ಅಬಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ, ಸಂಸದ ಪಿ.ಸಿ. ಗದ್ದಿಗೌಡರ, ವಿ.ಪ ಸದಸ್ಯರಾದ ಎಸ್.ವಿ. ಸಂಕನೂರ, ಪ್ರದೀಪ ಶೆಟ್ಟರ್, ಶಾಸಕರಾದ ಸಿ.ಸಿ. ಪಾಟೀಲ, ಡಾ.ಚಂದ್ರು ಲಮಾಣಿ, ಅಸುಂಡಿ ಗ್ರಾ.ಪಂ ಅಧ್ಯಕ್ಷ ತಾಜುದ್ದೀನ ಹ. ಓಲೇಕಾರ ಆಗಮಿಸುವರು.

ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ನಿರ್ದೇಶಕ ಡಾ. ಬಸವರಾಜ ಪಿ.ಬೊಮ್ಮನಹಳ್ಳಿ, ಧಾರವಾಡದ ಆಕುಕ ಇಂಜಿನಿಯರಿಂಗ್ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರ ಎಸ್.ಎನ್. ಸುರೇಶ, ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಪ್ರಾಂಶುಪಾಲ ಡಾ. ರಾಜು ಜಿ.ಎಮ್, ಅಧೀಕ್ಷಕಿ ಡಾ. ರೇಖಾ ಎಸ್.ಸೋನಾವನೆ, ಆರ್ಥಿಕ ಸಲಹೆಗಾರ ಪ್ರಶಾಂತ ಜೆ.ಸಿ, ಜಿಲ್ಲಾ ಶ್ರಚಿಕಿತ್ಸಕ ಡಾ. ಬಿ.ಸಿ. ಕರೀಗೌಡರ, ವೈದ್ಯಕೀಯ ಶಿಕ್ಷಣ ಇಲಾಖೆ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಬೋಧಕ, ಬೋಧಕೇತರ ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿಗಳು ಸರ್ವರಿಗೂ ಸ್

ಸಂಪಾದಕೀಯ

ವಾಕ್ ಸ್ವಾತಂತ್ರ್ಯದ ಹರಣ

ಹೋಟೆಲ್ ಉದ್ಯಮಿಯೊಬ್ಬರು ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಎದುರು ಕ್ಷಮೆ ಕೋರಿದ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ. ಆ ವಿಡಿಯೋ ಹಿಂದಿನ ಕಥೆಯನ್ನ ಓದಿದರೆ ಭಾರತದಲ್ಲಿ ವಾಕ್ ಸ್ವಾತಂತ್ರ ಇಲ್ಲ ಎನ್ನುವುದು ಸಾಬೀತಾಗುತ್ತದೆ.

ಹೋಟೆಲ್ ಉದ್ಯಮಿಯೊಬ್ಬರು ಸಾರ್ವಜನಿಕ ಸಭೆ ಒಂದರಲ್ಲಿ ಜಿಎಸ್‌ಟಿ ಕುರಿತು ತಮ್ಮ ಅಭಿಪ್ರಾಯವನ್ನು ಹೇಳಿದ್ದಾರೆ. ವೇದಿಕೆ ಮೇಲೆ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಸಹ ಉಪಸ್ಥಿತರಿದ್ದರು. ಸಚಿವರು ಇದ್ದ ಕಾರಣಕ್ಕಾಗಿಯೇ ಹೋಟೆಲ್ ಉದ್ಯಮಿಯೊಬ್ಬರು ಜಿಎಸ್‌ಟಿಯಲ್ಲಿನ ಲೋಪದೋಷಗಳನ್ನು ಅತ್ಯಂತ ವಿನಮ್ರವಾಗಿಯೇ ಹೇಳಿ, ಆಗಿರುವ ತಪ್ಪನ್ನು ಸರಿಪಡಿಸುವಂತೆ ನಿರ್ಮಲ ಸೀತಾರಾಮನ್ ಅವರಲ್ಲಿ ವಿನಂತಿಸಿಕೊಂಡಿದ್ದಾರೆ.

ಹೋಟೆಲ್ ಉದ್ಯಮಿಯ ಹೇಳಿಕೆಯನ್ನ ಸಕಾರಾತ್ಮಕವಾಗಿ ಸ್ವೀಕರಿಸಬೇಕೆಂದ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್, ಹೋಟೆಲ್ ಉದ್ಯಮಿಯನ್ನ ಕರೆಸಿ ಬೆದರಿಕೆ ಒಡ್ಡಿದ್ದಾರೆ. ಸಚಿವರ ಬೆದರಿಕೆಯಿಂದ ಹೆದರಿದ ಉದ್ಯಮಿ ಕ್ಷಮಾಪಣೆಯನ್ನೂ ಕೇಳಿದ್ದಾರೆ. ಉದ್ಯಮಿ ಕ್ಷಮಾಪಣೆ ಕೇಳಿರುವ ವಿಡಿಯೋವನ್ನು ಬಿಜೆಪಿ ಸಾಮಾಜಿಕ ಜಾಲತಾಣ ಹಂಚಿಕೊಂಡಿದೆ.

ಆ ಮೂಲಕ ಕೇಂದ್ರ ಸಚಿವರ ವಿರುದ್ಧ ಅಥವಾ ಕೇಂದ್ರದ ನೀತಿ ನಿರೂಪಣೆಗಳ ವಿರುದ್ಧ ಹೇಳಿಕೆ ನೀಡಿದವರಿಗೆ ಇದೇ ಗತಿ ಎನ್ನುವ ಸಂದೇಶವನ್ನು ನೀಡಿದ್ದಾರೆ. ಸದ್ಯ ಆ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ಸಾಕಷ್ಟು ಹರಿದಾಡುತ್ತಿದ್ದು, ನಿರ್ಮಲಾ ಸೀತಾರಾಮನ್ ನಡೆಗೆ ವ್ಯಾಪಕ ಖಂಡನೆ ವ್ಯಕ್ತವಾಗಿದೆ.

ಇದೊಂದು ಸಣ್ಣ ಘಟನೆ ಎನಿಸಿದರು ಭಾರತದಲ್ಲಿ ವಾಕ್ ಸ್ವಾತಂತ್ರಕ್ಕೆ ಬೆಲೆ ಇಲ್ಲ ಎನ್ನುವುದಕ್ಕೆ ಸಾಕ್ಷಿಯಾಗಿದೆ. ಸಚಿವರ ಮುಂದೆ ತಮ್ಮ ಅಭಿಪ್ರಾಯಗಳನ್ನ ಹೇಳಿಕೊಳ್ಳಲುವುದಕ್ಕೂ ಸ್ವಾತಂತ್ರ್ಯ ಇಲ್ಲ ಎನ್ನುವುದು ಸಾಬೀತಾಗಿದೆ.

ಘಟನೆ ಕುರಿತಂತೆ ತಮಿಳುನಾಡಿನ ಬಿಜೆಪಿ ರಾಜ್ಯಾಧ್ಯಕ್ಷ ಅಣ್ಣಾಮಲೈ ಕ್ಷಮೆಯನ್ನು ಕೇಳಿದ್ದಾರೆ. ಆದರೆ ಉದ್ಯಮಿಯನ್ನ ಅವಮಾನಿಸಿದ್ದಕ್ಕೆ ಯಾರೊಬ್ಬರೂ ಕ್ಷಮೆಯನ್ನು ಕೇಳಿಲ್ಲ. ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯ ಈ ಸಂದರ್ಭದಲ್ಲಿ ಇಂತಹ ಘಟನೆಗಳು ಸಂವಿಧಾನಕ್ಕೆ ಮಾಡುವ ಅಪಚಾರ ಎನ್ನುವುದನ್ನು ನಿರ್ಮಲಾ ಸೀತಾರಾಮನ್ ಅರ್ಥಮಾಡಿಕೊಳ್ಳಬೇಕು.

ಕೇಂದ್ರ ಸರ್ಕಾರ ಅಥವಾ ಕೇಂದ್ರದ ಮಂತ್ರಿಗಳು ಸಾರ್ವಜನಿಕ ವಲಯದ ಉದ್ಯಮಿಗಳು ಅಥವಾ ಜನಸಾಮಾನ್ಯರ ಅಹವಾಲುಗಳನ್ನು ಸಕಾರಾತ್ಮಕವಾಗಿ ತೆಗೆದುಕೊಳ್ಳುವ ಮನಸ್ಥಿತಿಯನ್ನ ರೂಡಿಸಿಕೊಳ್ಳಬೇಕು.

ಜೀವ ಬೆದರಿಕೆ, ಜಾತಿ ನಿಂದನೆ ಕೇಸ್: ಬಿಜೆಪಿ ಶಾಸಕ ಮುನಿರತ್ನ ಅರೆಸ್ಟ್!

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಜೀವ ಬೆದರಿಕೆ, ಜಾತಿ ನಿಂದನೆ ಕೇಸ್‌ಗೆ ಸಂಬಂಧಿಸಿದಂತೆ ಬಿಜೆಪಿ ಶಾಸಕ ಮುನಿರತ್ನ ಬಂಧಿಸುವಲ್ಲಿ ಪೊಲೀಸರು ಯಶಸ್ವಿಯಾಗಿದ್ದಾರೆ.

ಗುತ್ತಿಗೆದಾರ ಚಲುವರಾಜು ಅವರಿಗೆ ಜೀವ ಬೆದರಿಕೆ ಹಾಕಿ, ಜಾತಿ ನಿಂದನೆ ಮಾಡಿದ ಆರೋಪದಲ್ಲಿ ಮುನಿರತ್ನ ತಲೆಮರೆಸಿಕೊಂಡಿದ್ದರು. ಇದೀಗ ಪೊಲೀಸರು ಕೋಲಾರ ಜಿಲ್ಲೆಯ ಮುಳಬಾಗಿಲು ತಾಲೂಕಿನ ನಂಗಲಿ ಗ್ರಾಮದಲ್ಲಿ ಅವರನ್ನು ಬಂಧಿಸಿದ್ದಾರೆ. ಕೋಲಾರದಿಂದ ಆಂಧ್ರದ ಚಿತ್ತೂರಿಗೆ ತೆರಳುತ್ತಿದ್ದ ಮುನಿರತ್ನ ಅವರನ್ನು ಮೊಬೈಲ್ ಫೋನ್ ಲೊಕೇಷನ್ ಆಧರಿಸಿ ಪತ್ತೆ ಮಾಡಲಾಗಿದೆ. ಕೇಸ್ ದಾಖಲಾದಾಗಿನಿಂದ ಮುನಿರತ್ನ ಮೇಲೆ ಪೊಲೀಸರು ನಿಗಾ ವಹಿಸಿದ್ದರು.

ರಕ್ತದಾನ ಶಿಬಿರ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ವಿಶ್ವಕರ್ಮ ಸಮಾಜದ ವತಿಯಿಂದ ಶ್ರೀ ವಿಶ್ವಕರ್ಮ ಮಹೋತ್ಸವದ ಅಂಗವಾಗಿ ಸ್ವಯಂಪ್ರೇರಿತ ರಕ್ತದಾನ, ತಪಾಸಣಾ ಶಿಬಿರ ಮತ್ತು ವಿದ್ಯಾರ್ಥಿಗಳಿಗಾಗಿ ವಿವಿಧ ಸ್ಪರ್ಧೆಗಳನ್ನು ಸೆ. 15ರ ಬೆಳಿಗ್ಗೆ 9.30ಕ್ಕೆ ನಗರದ ವಿಜಯನಗರ ಬಡಾವಣೆಯಲ್ಲಿರುವ ಶ್ರೀ ವಿಶ್ವಕರ್ಮ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ. ಗದಗ ಜಿಲ್ಲಾ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾದ ರಾಜಗೋಪಾಲ ಡಿ.ಕಡ್ಲಿಕೊಪ್ಪ ಅಧ್ಯಕ್ಷತೆ ವಹಿಸುವರು.

ಶಿಗ್ಗಾಂವಿಯ ನಿವೃತ್ತ ಸ್ತ್ರಿರೋಗ ತಜ್ಞರಾದ ಡಾ. ಪದ್ಮಾವತಿ ಪತ್ತಾರ ಕಾರ್ಯಕ್ರಮ ಉದ್ಘಾಟಿಸುವರು. ಡಿಜಿಎಂ ಆಯುರ್ವೇದ ಮಹಾವಿದ್ಯಾಲಯದ ನಿವೃತ್ತ ಪ್ರಾಚಾರ್ಯ ಡಾ. ಉಮೇಶ ಪುರದ ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳುವರು. ರಕ್ತದಾನ ಮಾಡಲಿಚ್ಛಿಸುವವರು ಡಾ. ಗಿರೀಶ ಬಡಿಗೇರ ಇವರ ಮೊ. ನಂ. 9742842134 ಸಂಖ್ಯೆಗೆ ಸಂಪರ್ಕಿಸಲು ಕೋರಲಾಗಿ. ಸಮಾಜ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಸಮಾರಂಭದಲ್ಲಿ ಪಾಲ್ಗೊಳ್ಳಲು ಸಂಘಟಕರು ಕೋರಿದ್ದಾರೆ.

ವಾರ್ಷಿಕ ಸರ್ವ ಸಾಧಾರಣ ಸಭೆ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ವಿಶ್ವಕರ್ಮ ನೌಕರರ ಪತ್ತಿನ ಸಹಕಾರಿ ಸಂಘ ಹಾಗೂ ಶ್ರೀ ವಿಶ್ವಕರ್ಮ ಮಹಿಳಾ ಪತ್ತಿನ ಸಹಕಾರಿ ಸಂಘ ಇವುಗಳ 6ನೇ ವರ್ಷದ ಸರ್ವ ಸಾಧಾರಣ ಸಭೆಯನ್ನು ಸೆ. 15ರಂದು ಬೆಳಿಗ್ಗೆ 11.30ಕ್ಕೆ ನಗರದ ವಿಜಯನಗರ ಬಡಾವಣೆಯಲ್ಲಿರುವ ಶ್ರೀ ವಿಶ್ವಕರ್ಮ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

ಗಿಣಿಗೇರಾ ಶ್ರೀಮತ್ ಆನೆಗೊಂದಿ ಮಹಾಸಂಸ್ಥಾನ ಸರಸ್ವತಿಪೀಠದ ಶ್ರೀ ಅಭಿನವ ಶ್ರೀಕಂಠ ಸ್ವಾಮಿಗಳು ಸಾನ್ನಿಧ್ಯ ವಹಿಸುವರು. ಶ್ರೀಜ. ತೋಂಟದಾರ್ಯ ಮಠದ ಆಡಳಿತಾಧಿಕಾರಿಗಳಾದ ಪ್ರಾ. ಶಿವಾನಂದ ಪಟ್ಟಣಶೆಟ್ಟಿ ಸಭೆಯನ್ನು ಉದ್ಘಾಟಿಸುವರು. ವಿಶ್ವಕರ್ಮ ನೌಕರರ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷರಾದ ರಾಜಗೋಪಾಲ ಡಿ. ಕಡ್ಲಿಕೊಪ್ಪ ಅಧ್ಯಕ್ಷತೆ ವಹಿಸುವರು. ಶ್ರೀ ವಿಶ್ವಕರ್ಮ ಮಹಿಳಾ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷರಾದ ರಿಂದಮ್ಮ ತೋಟಗಂಟಿ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಯಾಗಿ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಹೇಶ ಪೋತದಾರ, ರೋಣ ವಲಯ ಅಬಕಾರಿ ನಿರೀಕ್ಷಕರಾದ ಗಂಗಾಧರ ಬಡಿಗೇರ, ಕುರ್ತಕೋಟಿ ಕರಕುಶಲ ಕೌಶಲ್ಯಾಭಿವೃದ್ಧಿ ಸಂಘದ ಅಧ್ಯಕ್ಷರಾದ ಮುತ್ತಣ್ಣ ಆರ್.ಬಡಿಗೇರ, ಅಖಿಲ ಕರ್ನಾಟಕ ವಿಶ್ವಕರ್ಮ ಮಹಾಸಭಾ ಗದಗ ಜಿಲ್ಲಾ ಅಧ್ಯಕ್ಷರಾದ ದೇವೇಂದ್ರಪ್ಪ ಬಡಿಗೇರ, ಗದಗ ಜಿಲ್ಲಾ ವಿಶ್ವಕರ್ಮ ಕಟ್ಟಡ ಕಾರ್ಮಿಕರ ಸಂಘದ ಅಧ್ಯಕ್ಷರಾದ ವೀರಣ್ಣ ಹಲವಾಗಲಿ ಹಾಗೂ ಬೆಟಗೇರಿ ಶ್ರೀಕಾಳಿಕಾದೇವಿ ದೇವಸ್ಥಾನ ಟ್ರಸ್ಟ್ ಕಮಿಟಿ ಅಧ್ಯಕ್ಷರಾದ ಶ್ರೀಧರ ಕೊಣ್ಣೂರ ಆಗಮಿಸುವರು.

ಉಪಾಧ್ಯಕ್ಷರಾದ ರವೀಂದ್ರ ಕಮ್ಮಾರ, ಕಾರ್ಯದರ್ಶಿ ಎಸ್.ಎಮ್. ಕರಡಿ, ಉಪಾಧ್ಯಕ್ಷರಾದ ಪುಷ್ಪಾ ವಿಶ್ವಜ್ಞ, ಕಾರ್ಯದರ್ಶಿ ವಾಣಿಶ್ರೀ ಕಡ್ಲಿಕೊಪ್ಪ ಮತ್ತು ನಿರ್ದೇಶಕ ಮಂಡಳಿಯ ಸರ್ವ ಸದಸ್ಯರು ಸರ್ವ ಸದಸ್ಯರಿಗೆ ಸ್ವಾಗತ ಕೋರಿದ್ದಾರೆ.

ಅಂತಿಮ ಪ್ರವಾದಿ ಮುಹಮ್ಮದರ (ಸ)ರ ಜನ್ಮ ದಿನಾಚರಣೆ 'ಈದ ಮಿಲಾದ' ನಿಮಿತ್ತ ಲೇಖನ

ಪ್ರವಾದಿಗಳ ಜೀವನದ ಸಂದೇಶ ಮಾದರಿಯಾಗಲಿ

ಕ್ರಿ.ಶ. 571ರ ರಬೀಉಲ್ ಅವ್ವಲ್ ತಿಂಗಳ 9ನೇ ತಾರೀಖು ಸೋಮವಾರ ಮದ್ಯಾಹ್ನದ ಸಮಯ. ಪ್ರವಾದಿಯರ್ವರ (ಸ) ಜನನ. ಮಕ್ಕಾದ ಸರದಾರ ಅಬ್ದುಲ್ ಮುತ್ತಲಿಬ್ ಇವರ ಪುತ್ರ ಪೈ.ಅಬ್ದುಲಾರ ದಾಸಿ ಬರ್ಕ ಓಡೋಡಿ ಬರುತ್ತಾಳೆ ಹತ್ತಿರ ಬಂದು ಏದುಸಿರು ಬಿಡುತ್ತ ಮುಖ ಅರಳಿಸಿತ್ತಲೇ "ಸರದಾರರೇ, ಶುಭವಾಗಲಿ, ಅಮ್ಮಾ ಚಂದ್ರನಂತಹ ಮಗುವಿಗೆ ಜನ್ಮಕೊಟ್ಟಿದ್ದಾರೆ ಅತ್ಯಂತ ಸುಂದರ ಪುತ್ರ" ಎಂದು ಒಂದೇ ಉಸಿರಿನಲ್ಲಿ ಹೇಳುತ್ತಾಳೆ.

ಆನಂದಾತಿರೇಕದಿಂದ ಆಕೆಯ ಕಾಲು ನೆಲದ ಮೇಲೆ ನಿಲ್ಲಲೊಲ್ಲದು. "ಸರದಾರರೇ, ಅಮ್ಮ ತಮ್ಮನ್ನು ಕರೆಯುತ್ತಿದ್ದಾರೆ. ಬೇಗ ಬನ್ನಿ, ಓಹೋ! ಮಗು ಎಷ್ಟು ಸುಂದರ, ಚಂದ್ರನಂತಹ ಮುಖ, ಕಾಡಿಗೆಯಂತಹ ಕಣ್ಣುಗಳು, ಅತ್ಯಂತ ಪರಿಶುದ್ಧ ದೇಹ. ಸರದಾರರೇ ಆ ಮಗುವಿನ ದೇಹದಿಂದ ಸುಗಂಧ ಸೂಸುತ್ತಿದೆ. ಅಮ್ಮನವರು ಕೋಣೆಯಿಡಿ ಪರಿಮಳ ಭರಿತವಾಗಿದೆ. ಇಷ್ಟು ಹೇಳಿ ಓಡಿ ಹೋಗುತ್ತಾಳೆ. ವೃದ್ದ ಅಬ್ದುಲ್ ಮುತಲಿಬ್‌ರು 'ಓ ಅಲ್ಲಾಹ ನಿನಗೆ ಕೃತಜ್ಞತೆ ಸಲ್ಲಿಸಲು ನನಗೆ ಮಾತೆ ಹೊರಡುತ್ತಿಲ್ಲ, ನನಗೆ ಆಸರೆಯನ್ನು ದಯಪಾಲಿಸಿದೆ, ನನ್ನ ಮನೆಯ ಜ್ಯೋತಿಯನ್ನು ಬೆಳಗಿಸಿದೆ ಅದನ್ನು ಸಂರಕ್ಷಿಸು" ಎಂದು ಕೈಎತ್ತಿ ಬೇಡುತ್ತಾರೆ.

ಪ್ರವಾದಿಗಳು ಹುಟ್ಟಿದ ಏಳೇ ದಿನಗಳಲ್ಲಿ ಸುತ್ತಲಿನ ಪ್ರದೇಶಗಳಲ್ಲಿ ಕುರ್ಬಾನಿ (ಬಲಿದಾನ), ಔತಣಕೂಟವನ್ನು ಆಚರಿಸುತ್ತಾರೆ. ಆಗ ಅಬ್ದುಲ್ ಮುತ್ತಲಿಬ್‌ರು "ಮುಹಮ್ಮದ" ಎಂದು ಹೆಸರು ಇಡುತ್ತಾರೆ. ಇಂತಹ ತೇಜಮೂರ್ತಿಯ ಜನನದಿಂದ ಜನರು ತಂಡೋಪ ತಂಡವಾಗಿ ನೋಡಲು ಬರುತ್ತಾರೆ, ಒಳ್ಳೆಯ ಗುಣವುಳ್ಳ ಅಲ್ಲಾಹನ ಮಾರ್ಗದಲ್ಲಿ ನಡೆಯುವ ಹಲೀಮಾ ಎಂಬ ಮಹಿಳೆ ಮುಹಮ್ಮದ (ಸ)ರಿಗೆ ಸ್ತನಪಾನ ಮಾಡಿಸುವ ಸೌಭಾಗ್ಯ ಅವಳ ಪಾಲಾಯಿತು.

ಯೌವನಕ್ಕೆ ಕಾಲಿರಿಸಿದ ಮುಹಮ್ಮದ (ಸ)ರು ಆರೋಗ್ಯವಂತ ದೇಹ, ವಿಶಾಲ ಬುದ್ಧಿ, ಪ್ರಜ್ಞೆ ಮತ್ತು ವಿವೇಕ, ಅಸಾಮಾನ್ಯ ಸಾಮರ್ಥ್ಯಗಳು ಮತ್ತು ಸಜ್ಜನಿಕೆ ಜನರನ್ನು ಬಹಳ ಪ್ರಭಾವಿತಗೊಳಿಸುತ್ತದೆ ಮುಂದೆ ಎಲ್ಲರ ಗಮನ ಸೆಳೆಯುತ್ತದೆ.

ಧರ್ಮ ಪ್ರಚಾರ: ಮುಂದೆ ಮುಹಮ್ಮದ್ (ಸ)ರು ಧರ್ಮಪ್ರಚಾರಗಳನ್ನು ವಿವಿಧ ಸ್ಥಳಗಳಲ್ಲಿ ಕೈಗೊಂಡರು. ಅದರಲ್ಲಿ ಮುಖ್ಯವಾದದ್ದು ದುಲ್ ಮುಜಾಝ ಪೇಟೆಯಲ್ಲಿ ಮುಹಮ್ಮದ್(ಸ) ಜನರಿಗೆ "ಜನರೇ ಅಲ್ಲಾಹನಲ್ಲದೆ ಅನ್ಯ ಆರಾಧ್ಯನಿಲ್ಲ'ವೆಂದು ಹೇಳಿರಿ, ನೀವು ಜಯಶೀಲರಾಗುವಿರಿ" ಎಂದರು ಅವರ ಹಿಂದೆಯೇ ಅಬೂಲಹಬ್ ಅವರೆಡೆಗೆ ಕಲ್ಲೆಸೆಯುತ್ತಿದ್ದನು ಮುಹಮ್ಮದ್(ಸ) ರ ಪಾದಗಳು ರಕ್ತದಿಂದ ತೊಯ್ದು ಹೋಗುತ್ತದೆ. "ಇವನು ಸುಳ್ಳುಗಾರ, ಇವನ ಮಾತನ್ನು ಕೇಳದಿರಿ ಎಂದು ಮುಹಮ್ಮದ(ಸ) ರ ವಿರುದ್ಧವಾಗಿ ಕೂಗುತ್ತಾನೆ. ಮುಹಮ್ಮದ್(ಸ)ರು ಜನರನ್ನು ಉದ್ದೇಶಿಸಿ ಕೇಳಿರಿ! ನಿಮ್ಮ ಪ್ರಭುವನ್ನು ಆರಾಧಿಸಿರಿ, ದಿನಕ್ಕೆ ಐದು ಬಾರಿ ನಮಾಝ್ ನಿರ್ವಹಿಸಿರಿ. ರಮಝಾನ್ ತಿಂಗಳಲ್ಲಿ ಉಪವಾಸ ಆಚರಿಸಿರಿ. ಅಲ್ಲಾಹನ ಭವನದ ಹಜ್ಜ್‌ಯಾತ್ರೆ ಕೈಗೊಳ್ಳಿರಿ ಎಂದು ಉಪದೇಶಿಸಿದರು.

ಮುಹಮ್ಮದ್(ಸ)ರಿಗೆ ವಯಸ್ಸಾಗುತ್ತದೆ, ಹಗಲು, ರಾತ್ರಿ ಧರ್ಮ ಪ್ರಚಾರದಲ್ಲಿ ತೊಡಗಿ ನಿಶಕ್ತಿಯುಳ್ಳವರಾಗುತ್ತಾರೆ. ಅಂತಿಮ ಯಾತ್ರೆಯ ಸಿದ್ದತೆಯಲ್ಲಿ ತೊಡಗಿತ್ತು. ಅಂದು ಮಂಗಳವಾರ ದಿನ ಆತ್ಮಶಾಂತಿ ಪಡೆಯಲು ಹ.ಅಲೀ ಮತ್ತು ಹ.ಫರ್ಝ್‌ಲ್ ಬಿನ್ ಅಬ್ಬಾಸ್(ಸ) ರ ಹೆಗಲುಗಳ ಮೇಲೆ ಕೈಯಿಟ್ಟು ಮಸೀದಿಗೆ ಬರುತ್ತಾರೆ. ಪ್ರವಾದಿಗಳ ಸ್ಥಿತಿ ನೋಡಿ ಅವರ ದರ್ಶನದಿಂದ ಎಲ್ಲರ ಕಣ್ಣುಗಳಿಂದಲೂ ಬಾಷ್ಪ ಉಕ್ಕಿ ಬರುತ್ತದೆ. ಈ ಭೂಮಿಯಲ್ಲಿ ಯಾರು ಶಾಶ್ವತವಲ್ಲ, ಈಗ ನಾನು ಅಲ್ಲಾಹನನ್ನು ಭೇಟಿಯಾಗಲಿರುವೆನು, ನೀವು ಅವನನ್ನು ಭೇಟಿಯಾಗಲಿರುವಿರಿ.....ನಾನು ಮೊದಲು ಹೋಗುತ್ತೇನೆ, ನೀವೂ ಬಂದು ನನ್ನ ಜತೆ ಸೇರಲಿರುವಿರಿ" ಎಂದು ಸೇರಿದ ಜನರಿಗೆ ಸಂತೈಸಿದರು.

ಅಂತಿಮ ದಿನದಲ್ಲಿ ತಮ್ಮಲ್ಲಿ ಇದ್ದ ಗುಲಾಮರನ್ನು ಮುಕ್ತಗೊಳಿಸಿದರು, ತಮ್ಮ ಮನೆಯಲ್ಲಿರುವ ಹಣವನ್ನು ಬಡವರಿಗೆ ದೀನರಿಗೆ ದಾನ ಮಾಡಿಸಿದರು, ತಮ್ಮಲ್ಲಿರುವ ಅಮೂಲ್ಯವಾದ ಆಯುಧಗಳನ್ನು ದೇಣಿಗೆ ನೀಡಿದರು. ಮುಹಮ್ಮದ್ (ಸ)ರ ಮರಣವು 11ನೇ ಹಿಜರಿ ಶಕೆ, 12ನೇಯ ರಬೀವುಲ್ ಅವ್ವಲ್, ಕ್ರಿ.ಶ. 632ರ ಜೂನ್ 8ರಂದು ಆಯಿತು, ಆಗ ಅವರಿಗೆ 63 ವರ್ಷವಾಗಿತ್ತು. ಪ್ರವಾದಿಗಳೆಲ್ಲರನ್ನು ಅಲ್ಲಾಹನು ಪ್ರಾಯೋಗಿಕ ಅನುಸರಣಾ ಮಾದರಿಗಳನ್ನಾಗಿ ಮಾಡಿ ಕಳುಹಿಸಿರುವನೆಂಬುದಂತೂ ನಿಸ್ಸಂಶಯ. ಆದ್ದರಿಂದ ಅವರ ಜೀವನಕ್ರಮದ ಅಧ್ಯಯನವು ಅನುಸರಣಾ ದೃಷ್ಟಿಯಿಂದ ಅವಶ್ಯವಾಗಿದೆ. ಅವರ ಜನನ ಮತ್ತು ಮರಣದಂತಹ ಘಟನೆಗಳನ್ನು ಹಬ್ಬದ ರೂಪದಲ್ಲಿ ಆಚರಿಸುವುದರಿಂದ ಅವರ ಜೀವನದ ಸಂದೇಶ ಎಲ್ಲರಿಗೂ ಮಾದರಿಯಾಗಲಿ, ಸನ್ಮಾರ್ಗದಲ್ಲಿ ನಡೆಯಲಿ ಎಂದೆನ್ನುತ್ತೇವೆ.

– ತಯಬಅಲಿ. ಅ ಹೊಂಬಳ, ಗದಗ.

ಜೀವಿತ ಕಾಲದಲ್ಲಿಯೇ ದಂತಕತೆಯಾದ ಸರ್ ಎಂ ವಿಶ್ವೇಶ್ವರಯ್ಯನವರು

ಭಾರತದ ಭಾಗ್ಯವಿಧಾತ

ಈ ನಾಡಿನ ಮಹತ್ವದ ಚಿಂತನೆಗಳ ಹಿಂದಿರುವ ಅತ್ಯಂತ ಪ್ರೇರಕ ಶಕ್ತಿ ಅಂದರೆ ಭಾರತರತ್ನ ಸರ್ ಎಂ. ವಿಶ್ವೇಶ್ವರಯ್ಯನವರು.

ಯಾವುದೇ ಕೆಲಸ ಕೀಳಲ್ಲ. ನಿನ್ನ ಕೆಲಸ ಈ ರಸ್ತೆಯ ಈ ಭಾಗವನ್ನು ಗುಡಿಸುವುದಾಗಿದ್ದರೆ, ಜಗತ್ತಿನ ಅತ್ಯಂತ ಸ್ವಚ್ಛ ರಸ್ತೆಯಾಗುವಂತೆ ಗುಡಿಸು. ಅದೃಷ್ಟ ಎನ್ನುವುದು ದೇವರ ಕೈಯಲ್ಲಿ ನಿಷ್ಕ್ರಿಯವಾಗಿರುವ ಸಾಧನವಲ್ಲ. ನಮ್ಮ ಡೆಸ್ಟಿನಿ, ನಮ್ಮ ವಿಧಿ – ಮನುಷ್ಯನ ಕೈಯಲ್ಲಿರುವ ಸಾಧನ ಎಂದು ಜಗತ್ತಿಗೆ ಸಾರಿ, 102, ವರ್ಷಗಳ ತುಂಬು ಬದುಕನ್ನು ಕರ್ಮಯೋಗಿಯಂತೆ ಬಾಳಿದವರು ಭಾರತರತ್ನ ಮೋಕ್ಷಗುಂಡಂ ವಿಶ್ವೇಶ್ವರಯ್ಯ. ಬದುಕಿಡೀ ನಾಡಿಗೆ ದುಡಿದು, ಸೇವೆ ಸಲ್ಲಿಸಿದ ನಮ್ಮ ನೆಲದ ಹೆಮ್ಮೆಯ ಈ ಭಾರತೀಯ, ತಮ್ಮ ಜೀವಿತಕಾಲದಲ್ಲಿಯೇ ದಂತಕತೆಯಾದರು.

ಇಂದು ನಮ್ಮ ಕನ್ನಡದ ನೆಲ, ವಿಜ್ಞಾನ, ತಂತ್ರಜ್ಞಾನಗಳ ತವರೂರಾಗಿದೆ. ಇದರ ಬುನಾದಿಯಲ್ಲಿ ವಿಶ್ವೇಶ್ವರಯ್ಯನವರ ಅಗಾಧ ಪರಿಶ್ರಮ, ದೂರದೃಷ್ಟಿ, ಸಮಾಜಮುಖಿ ಯೋಜನೆಗಳಿವೆ. ಅವರ ಪ್ರತಿಭೆಯನ್ನು ಮನಗಂಡು ಅವರೊಡನೆ ಸಹಕರಿಸಿದ, ಅವರ ಯೋಜನೆಗಳನ್ನು ಬೆಂಬಲಿಸಿದ ಮೈಸೂರು ಮಹಾರಾಜರು, ದಿವಾನರುಗಳ ಸಹಯೋಗವೂ ಇದೆ. ನಿಜವಾದ ಅರ್ಥದಲ್ಲಿ ವಿಶ್ವೇಶ್ವರಯ್ಯ

ಮೈಸೂರು ಸಂಸ್ಥಾನದ ಭಾಗ್ಯವಿಧಾತ, ಆಧುನಿಕ ಮೈಸೂರಿನ ನಿರ್ಮಾಣಕ್ಕೆ ಕಾರಣರಾದವರು.

ನಮ್ಮ ಚಿಕ್ಕಂದಿನಿಂದ ನಮ್ಮ ವಿಶ್ವೇಶ್ವರಯ್ಯನವರು ಕನ್ನಂಬಾಡಿ ಕಟ್ಟೆ ಕಟ್ಟಿದ್ದು ಎಂದು ಜನ ಆಪ್ತವಾಗಿ ಕತೆ ಹೇಳುತ್ತಿದ್ದುದನ್ನು ಕೇಳಿ ಬೆಳೆದವರು ನಾವು. ಆ ಕಾಲಕ್ಕಾಗಲೇ ವಿಶ್ವೇಶ್ವರಯ್ಯ ದಂತಕತೆಯಾಗಿದ್ದರು. ಕಟ್ಟೆಯ ಮೇಲಿಂದ ಕೆಳಗೆ ತೆರೆದ ಬಾಗಿಲುಗಳಿಂದ ಭೋರ್ಗರೆದು ಹರಿಯುವ ಕಾವೇರಿಯ ನೀರನ್ನು ನೋಡುವುದೇ ಒಂದು ಅದ್ಭುತ ಅನುಭವವಾಗಿತ್ತು.

ವಿಶ್ವೇಶ್ವರಯ್ಯನವರು 1861 ಸೆಪ್ಟೆಂಬರ್ 15ರಂದು ಕೋಲಾರ ಜಿಲ್ಲೆಯ ಮುದ್ದೇನಹಳ್ಳಿಯಲ್ಲಿ ಜನಿಸಿದರು. ತಂದೆ ಶ್ರೀನಿವಾಸಶಾಸ್ತ್ರಿ ಸಂಸ್ಕೃತ ವಿದ್ವಾಂಸರು. ತಾಯಿ ವೆಂಕಟಲಕ್ಷಮ್ಮನವರು. ಚಿಕ್ಕಬಳ್ಳಾಪುರದ ಸರ್ಕಾರಿ ಶಾಲೆಯಲ್ಲಿ ವಿಶ್ವೇಶ್ವರಯ್ಯ ಅವರ ಪ್ರಾಥಮಿಕ ವಿದ್ಯಾಭ್ಯಾಸ ಆರಂಭವಾಯಿತು. ನಮ್ಮ ಎಲ್ಲ ಆರ್ಥಿಕ ರೋಗಗಳಿಗೂ ವಿದ್ಯಾಭ್ಯಾಸವೇ ಮದ್ದು ಎಂದು ವಿಶ್ವೇಶ್ವರಯ್ಯ ಬಲವಾಗಿ ನಂಬಿದ್ದರು.

ಹೆಣ್ಣುಮಕ್ಕಳ ವಿದ್ಯಾಭ್ಯಾಸಕ್ಕಾಗಿ ಮಹಾರಾಣಿ ಕಾಲೇಜು, ಹಲವಾರು ಶಿಕ್ಷಣ ಸಂಸ್ಥೆಗಳು, ಹಾಸ್ಟೆಲ್ ಸೌಲಭ್ಯಗಳು, ಮೈಸೂರು ವಿಶ್ವವಿದ್ಯಾಲಯ, ವಿವಿಧರೀತಿಯ ಕೈಗಾ

ಶಿವಾನುಭವ ಕಾರ್ಯಕ್ರಮದಲ್ಲಿ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು

ಶಾಲೆಗಳು ಆಧುನಿಕ ದೇವಾಲಯಗಳು

■ ವಿಜಯಸಾಕ್ಷಿ ಸುದ್ದಿ, ಗದಗ

ನಮ್ಮ ದೇಶದ ಭವಿಷ್ಯಕ್ಕೆ, ಅಭಿವೃದ್ಧಿಗೆ ಪೂರಕವಾಗಿ ಉತ್ತಮ ಪ್ರಜೆಗಳನ್ನು ರೂಪಿಸುವಲ್ಲಿ ಶಿಕ್ಷಕರ ಪಾತ್ರ ಬಹಳ ದೊಡ್ಡದು. ಶಾಲೆಗಳು ಆಧುನಿಕ ದೇವಾಲಯಗಳು. ಅಲ್ಲಿ ಮಕ್ಕಳಿದ್ದಾರೆ. ನಗೆ ಇದೆ, ನೆಮ್ಮದಿ ಇದೆ, ಶಾಂತಿ ಇದೆ, ಸಂತೋಷವಿದೆ ಎಂದು ಡಾ. ತೋಂಟದ ಸಿದ್ಧರಾಮ ಶ್ರೀಗಳು ನುಡಿದರು.

ಲಿಂಗಾಯತ ಪ್ರಗತಿಶೀಲ ಸಂಘದ 2710ನೇ ಶಿವಾನುಭವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದ ಶ್ರೀಗಳು, ಶಿಕ್ಷಕ ಈ ದೇಶದ ಪರಮೋಚ್ಚ ಶಕ್ತಿ. ಶಿಕ್ಷಕರು ಯಾವಾಗಲೂ ಮಕ್ಕಳೊಂದಿಗೆ ಇರುವುದರಿಂದ ಅವರ ಮನಸ್ಸು ಕೂಡ ಶುಭ್ರವಾಗಿರುತ್ತದೆ. ಬಿ.ಜಿ. ಅಣ್ಣಿಗೇರಿ ಗುರುಗಳು ಶಿಕ್ಷಕ ಸಂತರಾಗಿದ್ದುಕೊಂಡು, ಸಾವಿರಾರು ಹಳ್ಳಿಯ ಬಡ ಮಕ್ಕಳಿಗೆ ಸಹಾಯ ಮಾಡಿ, ತಮ್ಮ ಜೀವನವನ್ನೇ ತ್ಯಾಗ ಮಾಡಿದರು. ಅವರು ಈ ಜಗದ ಬೆಳಕಾದರು. ಅವರು ಬಿಟ್ಟು ಹೋದ ಅಕ್ಷರದ ಬೆಳಕು, ಅಣ್ಣಿಗೇರಿ ಗುರುಗಳ ಆಶ್ರಮದಲ್ಲಿ ಈಗಲೂ ಬೆಳಗುತ್ತಿದೆ ಎಂದು ಸ್ಮರಿಸಿದರು.

ಮುಂದುವರೆದು ಮಾತನಾಡಿದ ಶ್ರೀಗಳು, ಸಾವಿತ್ರಿಬಾಯಿ ಫುಲೆಯವರು ಅನೇಕ ಕಷ್ಟ, ನೋವು, ಅವಮಾನ, ಸಂದಿಗ್ಧ ಪರಿಸ್ಥಿತಿಗಳನ್ನು ಸಹಿಸಿ, ಎದುರಿಸಿ

ಶಾಲೆಯನ್ನು ತೆರೆದು ಶಿಕ್ಷಣವನ್ನು ನೀಡಿದ್ದಾರೆ. ಸಾವಿತ್ರಿಬಾಯಿ ಫುಲೆಯವರು ನಮ್ಮ ದೇಶದ ಮೊಟ್ಟಮೊದಲ ಮಹಿಳಾ ಶಿಕ್ಷಕಿ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ಶಿಕ್ಷಕರು ರಾಧಾಕೃಷ್ಣರಂತೆ ತತ್ವಜ್ಞಾನಿಗಳಾಗಬೇಕು. ಅವರಂತೆ ಇಂದಿನ ಶಿಕ್ಷಕರು ಸದಾ ಅಭ್ಯಾಸ ಮಾಡುತ್ತ ಒಬ್ಬ ಶ್ರೇಷ್ಠ ಗುರುವಾಗಬೇಕೆಂದರು.

'ಅಧ್ಯಾಪಕ ಭೂಷಣ ಪ್ರಶಸ್ತಿ'ಯನ್ನು ಮುಂಡರಗಿಯ ಜಗದ್ಗುರು ತೋಂಟದಾರ್ಯ ಸಿಬಿಎಸ್‌ಇ ಶಾಲೆಯ ಪ್ರಾಚಾರ್ಯರಾದ ಶರಣಕುಮಾರ್ ಬುಗಟಿ ಹಾಗೂ ರೋಣದ ಶರಣಬಸವೇಶ್ವರ ಪ್ರೌಢಶಾಲೆಯ ಪ್ರಭಾರಿ ಮುಖ್ಯೋಪಾಧ್ಯಾಯೆ ಗಂಗೂಬಾಯಿ ದಿವಟರ ಅವರಿಗೆ ಪ್ರದಾನ ಮಾಡಲಾಯಿತು. ಡಿ.ಸಿ. ಪಾವಟೆ ಬಿ.ಇಡಿ. ಕಾಲೇಜಿನ ವಿದ್ಯಾರ್ಥಿ, ಶೇಕಡಾ 91.50 ಅಂಕ ಗಳಿಸಿ ಪ್ರಥಮ ಸ್ಥಾನ ಪಡೆದ ಹೀನಾ ಕೌಸರ್ ಮಾಳಿಕೊಪ್ಪ ಅವರನ್ನು ಸನ್ಮಾನಿಸಲಾಯಿತು.

ಮಾಜಿ ಸಚಿವರಾದ ಎಸ್.ಎಸ್. ಪಾಟೀಲ ಉಪಸ್ಥಿತರಿದ್ದರು. ದಾಸೋಹ ಸೇವೆಯನ್ನು ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದ ಅಧ್ಯಕ್ಷ ಶಿವಕುಮಾರಗೌಡ ಪಾಟೀಲ ಇವರು ವಹಿಸಿದ್ದರು. ಧರ್ಮಗ್ರಂಥ ಪಠಣವನ್ನು ಪ್ರತೀಕ್ಷಾ ಎಂ.ತುಕ್ಕಪ್ಪನವರ ಹಾಗೂ ವಚನ ಚಿಂತನವನ್ನು ಪ್ರಣವಿ ಬಿ.ಅಣ್ಣಿಗೇರಿ ಮಾಡಿದರು. ಸಂಗೀತ ಸೇವೆಯನ್ನು ಮೃತ್ಯುಂಜಯ ಹಿರೇಮಠ ಹಾಗೂ ಗುರುನಾಥ್ ಸುತಾರ ನೇರವೇರಿಸಿದರು.

ಪ್ರೊ. ಶಿವಾನಂದ ಹೊಂಬಳ ಕಾರ್ಯಕ್ರಮ ನಿರೂಪಿಸಿದರು. ಸರ್ವರನ್ನು ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷರಾದ ಬಾಲಚಂದ್ರ ಭರಮಗೌಡ್ರ ಸ್ವಾಗತಿಸಿದರು. ಉಪಾಧ್ಯಕ್ಷ ಉಮೇಶ ಪುರದ, ವಿದ್ಯಾವತಿ ಪ್ರಭು ಗಂಜಿಹಾಳ, ಕಾರ್ಯದರ್ಶಿ ವೀರಣ್ಣ ಗೋಟಡಕಿ, ಸಹಕಾರ್ಯದರ್ಶಿ ಸೋಮಶೇಖರ ಪುರಾಣಿಕ, ನಾಗರಾಜ ಹಿರೇಮಠ, ಸಂಘಟನಾ ಕಾರ್ಯದರ್ಶಿ ಮಹೇಶ ಗಾಣಿಗೇರ, ಕೋಶಾಧ್ಯಕ್ಷ ಬಸವರಾಜ ಕಾಡಪ್ಪನವರ, ಶಿವಾನುಭವ ಸಮಿತಿ ಚೇರಮನ್‌ರಾದ ಐ.ಬಿ. ಬೆನಕೊಪ್ಪ, ಶಿವಾನುಭವ ಸಮಿತಿ ಸಹಚೇರಮನ್‌ರಾದ ಶಿವಾನಂದ ಹೊಂಬಳ ಉಪಸ್ಥಿತರಿದ್ದರು.

'ಭವಿಷ್ಯದಲ್ಲಿ ಶಿಕ್ಷಕರ ಪಾತ್ರ' ಕುರಿತು ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾ ಅಧ್ಯಕ್ಷರಾದ ವಿವೇಕಾನಂದಗೌಡ ಪಾಟೀಲ ಅವರು ಉಪನ್ಯಾಸ ನೀಡಿ, ನಾನು ಅಣ್ಣಿಗೇರಿ ಗುರುಗಳ ಶಿಷ್ಯ. ಅಣ್ಣಿಗೇರಿ ಗುರುಗಳು ತಮ್ಮ ಪಗಾರವನ್ನು ಬಡ ಮಕ್ಕಳ ಶಿಕ್ಷಣಕ್ಕೆ, ಬಟ್ಟೆಗಳಿಗೆ, ಪುಸ್ತಕಗಳಿಗಾಗಿ ವ್ಯಯಿಸುತ್ತಿದ್ದರು. ಅತೀ ದಡ್ಡ ಹುಡುಗರನ್ನು ಆಶ್ರಮದಲ್ಲಿ ಇಟ್ಟುಕೊಂಡು ಒಳ್ಳೆಯ ವ್ಯಕ್ತಿಗಳನ್ನಾಗಿ ನಿರ್ಮಿಸುವ ಕಲೆ ಅವರಿಗೆ ಸಿದ್ಧಿಸಿತ್ತು. ಕಲಿಕೆ ನಿರಂತರ ಪ್ರಕ್ರಿಯೆ. ಭವಿಷ್ಯದಲ್ಲಿ ಶಿಕ್ಷಕರು ತಂತ್ರಜ್ಞಾನ ಬಳಸಿಕೊಂಡು, ಅನ್ವೇಷಕರಾಗಿ ಹೊಸ ಆಲೋಚನೆಗಳೊಂದಿಗೆ ಪಾಠಬೋಧನೆ ಮಾಡಬೇಕೆಂದರು ಸಲಹೆ ನೀಡಿದರು.

ಪಟ್ಟಣದ ಅಭಿವೃದ್ಧಿಗೆ ಪ್ರಾಮಾಣಿಕ ಕೆಲಸ ಮಾಡುವೆ

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಪಟ್ಟಣದ ಸರ್ವಾಂಗೀಣ ಅಭಿವೃದ್ಧಿಗೆ ಪುರಸಭೆ ಸರ್ವ ಸದಸ್ಯರ ಹಾಗೂ ಅಧಿಕಾರಿಗಳ ಸಹಕಾರ ಪಡೆದು ಪ್ರಾಮಾಣಿಕ ಕೆಲಸ ಮಾಡುತ್ತೇನೆ ಎಂದು ಪುರಸಭೆ ಅಧ್ಯಕ್ಷ ಸುಭಾಸ ಮ್ಯಾಗೇರಿ ಹೇಳಿದರು.

ಪಟ್ಟಣದ ಪುರಸಭೆಯಲ್ಲಿ ಶುಕ್ರವಾರ ಅಧ್ಯಕ್ಷರ ನೂತನ ಕೊಠಡಿಯಲ್ಲಿ ಪೂಜಾ ಕಾರ್ಯಕ್ರಮ ನೆರವೇರಿಸಿದ ಬಳಿಕ ಮಾತನಾಡಿದ ಅವರು, ಪಟ್ಟಣದ ಅಭಿವೃದ್ಧಿ ದೃಷ್ಟಿಯಿಂದ ಕೆಲ ನಿರ್ಧಾರಗಳನ್ನು ಕೈಗೊಳ್ಳುವುದು ಅನಿವಾರ್ಯವಾಗಿತ್ತು. ಹೀಗಾಗಿ ವಾರ್ಡಿನ ಜನರ ಮತ್ತು ಪಟ್ಟಣದ ಅಭಿವೃದ್ಧಿಗಾಗಿ ನನ್ನದೇ ಆದ ಕಲ್ಪನೆಯನ್ನು ಹೊಂದಿದ್ದೇನೆ. ಪಟ್ಟಣದ 23 ವಾರ್ಡ್‌ಗಳಲ್ಲಿ ಕುಡಿಯುವ ನೀರು, ಸ್ವಚ್ಛತೆ, ತರಕಾರಿ ಮಾರುಕಟ್ಟೆ ಸಮಸ್ಯೆ ಹಾಗೂ ಅಭಿವೃದ್ಧಿ ಕಾರ್ಯಗಳಿಗೆ ಸರ್ವ ಸದಸ್ಯರ ಸಹಕಾರ, ಸಲಹೆ ಪಡೆದು ಪ್ರಾಮಾಣಿಕ ಕೆಲಸ ನಿರ್ವಹಿಸುತ್ತೇನೆ ಎಂದರು.

ಪುರಸಭೆ ಪ್ರಭಾರಿ ಮುಖ್ಯಾಧಿಕಾರಿ ಬಸವರಾಜ ಬಳಗಾನೂರ, ಪುರಸಭೆ ಉಪಾಧ್ಯಕ್ಷೆ ಸವಿತಾ ಬಿದರಳ್ಳಿ, ಸದಸ್ಯರಾದ ಮುರ್ತುಜಾ ಡಾಲಾಯತ, ಶಿವರಾಜ ಘೋರ್ಪಡೆ, ಮುದಿಯಪ್ಪ ಮುಧೋಳ, ರಾಜು ಸಾಂಗ್ಲೀಕರ, ಶರಣಪ್ಪ ಉಪ್ಪಿನಬೆಟಗೇರಿ, ವೆಂಕಟೇಶ ಮುದಗಲ್, ಮುತ್ತಣ್ಣ ಮ್ಯಾಗೇರಿ, ರಫೀಕ್ ತೋರಗಲ್, ವಿಜಯಾ ಮಳಗಿ, ಹಾಗೂ ದುರಗಪ್ಪ ಮುಧೋಳ, ಎಂ.ವಾಯ್. ಮುಧೋಳ, ಗುಲಾಂ ಹುನಗುಂದ, ಸಿದ್ದಣ್ಣ ಚೋಳಿನ ಸೇರಿ ಇತರರು ಇದ್ದರು.

ಪೈಗಂಬರರ ಆದರ್ಶಗಳನ್ನು ಪಸರಿಸೋಣ

■ ವಿಜಯಸಾಕ್ಷಿ ಸುದ್ದಿ, ಗದಗ

ಮುಸ್ಲಿಂ ಧರ್ಮದ ಪ್ರವಾದಿಗಳಾದ ಹಜರತ್ ಮುಹಮ್ಮದ ಪೈಗಂಬರ್ ಅವರ ಜಯಂತಿಯನ್ನು ಸೆ.16ರಂದು ಬೆಳಿಗ್ಗೆ 10.30ಕ್ಕೆ ನಗರದ ಸರಕಾರಿ ಉರ್ದು ಬಾಲಕಿಯರ ಪ್ರೌಢಶಾಲೆಯಲ್ಲಿ ಅದ್ದೂರಿಯಾಗಿ ಆಚರಿಸಲು ನಿರ್ಧರಿಸಲಾಗಿದೆ ಎಂದು ಗದಗ-ಬೆಟಗೇರಿ ಈದ್ ಮಿಲಾದ ಕಮಿಟಿಯ ಅಧ್ಯಕ್ಷ ಬಾಷಾಸಾಬ ಮಲ್ಲಸಮುದ್ರ ಹೇಳಿದರು.

ನಗರದ ಪ್ರವಾಸಿ ಮಂದಿರದಲ್ಲಿ ಪ್ರವಾದಿ ಮುಹಮ್ಮದ ಪೈಗಂಬರ್ ಅವರ ಜಯಂತಿಯ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿ, ಜಯಂತಿ ಅಂಗವಾಗಿ ರಕ್ತದಾನ ಶಿಬಿರ, ಉಚಿತ ನೇತ್ರ ತಪಾಸಣೆ, ಗದಗ-ಬೆಟಗೇರಿ ಅವಳಿ ನಗರದ ಮಸ್ಜೀದಿಯ ಮುತವಲ್ಲಿಗಳಿಗೆ ಸನ್ಮಾನ, ವಿದ್ಯಾರ್ಥಿಗಳಿಗೆ ಪಠ್ಯ ಪುಸ್ತಕ ವಿತರಣೆ, ಸಾಧಕರಿಗೆ ಸನ್ಮಾನ, ಅನ್ನಸಂತರ್ಪಣೆ ಸೇರಿದಂತೆ ಹತ್ತು ಹಲವಾರು ಸಾಮಾಜಿಕ ಕಾರ್ಯಗಳನ್ನು ಹಮ್ಮಿಕೊಳ್ಳಲಾಗಿದೆ. ಜಯಂತಿ ಸಮಾರಂಭದಲ್ಲಿ ಧಾರ್ಮಿಕ ಗುರುಗಳು, ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ್ ಭಾಗವಹಿಸಲಿದ್ದಾರೆ ಎಂದರು.

ಕಮಿಟಿಯ ಕೋಶಾಧ್ಯಕ್ಷರಾದ ಕರೀಮಸಾಬ ಸುಣಗಾರ ಮಾತನಾಡಿ, ಕ್ರಿ.ಶ 6ನೇ ಶತಮಾನದಲ್ಲಿ ಅರೇಬಿಯಾದ ಮೆಕ್ಕಾದಲ್ಲಿ ಜನಿಸಿದ ಪ್ರವಾದಿ ಮುಹಮ್ಮದ ಪೈಗಂಬರರು ಅಂದಿನ ಮೌಢ್ಯಗಳ ವಿರುದ್ಧ ದನಿ ಎತ್ತಿದರು. ಅವರ ಜಯಂತಿಯನ್ನು ಎಲ್ಲರೂ ಒಟ್ಟಾಗಿ ಆಚರಿಸೋಣ. ಅವರ ಆದರ್ಶ ಮೌಲ್ಯಗಳನ್ನು ಪಸರಿಸುವ ಕಾರ್ಯವೂ ನಿರಂತರವಾಗಿ ನಡೆಯಬೇಕಿದೆ ಎಂದರು.

ಸಭೆಯಲ್ಲಿ ಕಮಿಟಿಯ ಉಪಾಧ್ಯಕ್ಷ ಅಬ್ದುಲ್ ರೆಹಮಾನ ರಾಟಿ, ಜಹಾಂಗೀರ್ ಮುಳಗುಂದ, ಮುಜಮಿಲ್ ಬಳ್ಳಾರಿ, ಚಾಂದಸಾಬ ಕೊಟ್ಟೂರ, ಆರೀಫ್ ಮುಳಗುಂದ, ಯೂಸುಫ್‌ಸಾಬ ಕೊಟ್ಟೂರ, ಅಲ್ತಾಫ ಇಲಕಲ್, ಯೂಸುಫ್ ಶಿರವಾರ, ರಿಯಾಜ ಡಾಲಾಯತ ಸೇರಿದಂತೆ ಹಲವರಿದ್ದರು.

ತಂದೆ ಇಲ್ಲದ ಮಕ್ಕಳ ಖಾತೆಗೆ ಸ್ಕಾಲರ್‌ಶಿಪ್ ಸಂದೇಶ: ಹೀಗೊಂದು ಸ್ಪಷ್ಟನೆ

■ ವಿಜಯಸಾಕ್ಷಿ ಸುದ್ದಿ, ಗದಗ

ತಂದೆ ಇಲ್ಲದ ಮಕ್ಕಳ ಖಾತೆಗೆ ವರ್ಷಕ್ಕೆ ರೂ.24000 ಸ್ಕಾಲರ್‌ಶಿಪ್ ಸೌಲಭ್ಯವಿದ್ದು ಜನಸಾಮಾನ್ಯರಿಗೆ ಈ ವಿಚಾರ ತಿಳಿದೇ ಇಲ್ಲ. ಆದುದರಿಂದ ತಮಗೆ ಗೊತ್ತಿರುವ ಯಾರಾದರೂ ತಂದೆ ಇಲ್ಲದ ಮಕ್ಕಳು ಇದ್ದಲ್ಲಿ ಅವರ ಪೋಷಕರಿಗೆ ಕೂಡಲೇ ಅರ್ಜಿ ಸಲ್ಲಿಸಲು ತಿಳಿಸಿ ಎಂಬ ಸಂದೇಶ ವಾಟ್ಸಪ್‌ನಲ್ಲಿ ಹರಿದಾಡುತ್ತಿದ್ದು, ಜನರನ್ನು ಗೊಂದಲಕ್ಕೀಡು ಮಾಡಿದೆ. ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಜಿಲ್ಲಾಧಿಕಾರಿಗಳ ಕಚೇರಿ ಸಂಕೀರ್ಣ ದಕ್ಷಿಣ ಕನ್ನಡ, ಮಂಗಳೂರು ಎಂಬ ಮೊಹರು ಹಾಕಿರುವ ಒಂದು ಅರ್ಜಿಯ ಫೋಟೋ ಹೊಂದಿರುವ ಈ ವಾಟ್ಸಪ್ ಸಂದೇಶ ಜನರ ಫೋನ್‌ಗಳಲ್ಲಿ ಒಂದು ತಿಂಗಳಿಂದ ಹರಿದಾಡುತ್ತಿದೆ.

ಈ ಸಂದೇಶವನ್ನು ನೋಡಿದ ಜನ ಪ್ರತಿನಿತ್ಯ ಗ್ರಾಮ ಪಂಚಾಯತಿ, ಕಂದಾಯ ಅಧಿಕಾರಿಗಳ ಕಚೇರಿ, ತಾಲೂಕ ಕಚೇರಿ, ಜಿಲ್ಲಾಧಿಕಾರಿ ಕಚೇರಿ ಹಾಗೂ ಮಕ್ಕಳ ರಕ್ಷಣಾ ಇಲಾಖೆ ಕಚೇರಿ ಸೇರಿ ಎಲ್ಲಾ ಕಡೆ ಅಲೆದಾಡುತ್ತಿದ್ದಾರೆ. ಮಕ್ಕಳ ರಕ್ಷಣಾಧಿಕಾರಿ ಕಚೇರಿಯಲ್ಲಿ ಪ್ರತಿದಿನ ನೂರಾರು ಜನರು ಬಂದು ಯೋಜನೆಯ ಬಗ್ಗೆ ಬಂದು ವಿಚಾರಿಸುತ್ತಿರುವುದು ಮತ್ತು ನೂರಾರು ಫೋನ್ ಕರೆಗಳು ಚಿಂತೆಗೀಡು ಮಾಡಿದೆ.)

ಇದರಲ್ಲಿ ಎರಡು ವರ್ಗಗಳಿವೆ

ಮುನ್ನೆಚ್ಚರಿಕೆ

ಸಂಕಷ್ಟಕ್ಕೆ ಈಡಾಗುವ ಕುಟುಂಬಕ್ಕೆ, ಮಗು ಜೈವಿಕ ಕುಟುಂಬದಲ್ಲೇ ಮುಂದುವರಿಸಲು ಪ್ರಾಯೋಜಕತ್ವ ಬೆಂಬಲ ಒದಗಿಸುವುದು, ಮಕ್ಕಳು ನಿರ್ಗತಿಕರಾಗುವುದನ್ನು, ಸಂಕಷ್ಟಕ್ಕಿಡಾಗುವುದು, ಓಡಿಹೋಗುವುದು, ಬಲವಂತದ ಬಾಲ್ಯವಿವಾಹ, ಬಾಲಕಾರ್ಮಿಕ ಪದ್ಧತಿ ಮುಂತಾದವುಗಳಿಂದ ತಡೆಗಟ್ಟುವ ಪ್ರಯತ್ನ ಇದಾಗಿದೆ.

ಪುನರ್ವಸತಿ

ಬಾಲನ್ಯಾಯ ಕಾಯ್ದೆಯಡಿ ನೋಂದಣಿಯಾದ ಸಂಸ್ಥೆಗಳಲ್ಲಿರುವ ಮಕ್ಕಳನ್ನು ಪ್ರಾಯೋಜಕತ್ವ ಸಹಾಯದೊಂದಿಗೆ ಕುಟುಂಬಗಳ ಜೊತೆಗೆ ಪುನರ್ ಸ್ಥಾಪಿಸುವುದು.

ಫಲಾನುಭವಿಯಾಗಳು ಇರುವ ಮಾನದಂಡಗಳು

ಯೋಜನೆಯ ಪ್ರಕಾರ ಫಲಾನುಭವಿಯಾಗಲು ಕೆಲವು ವಿಶೇಷ ಮಾನದಂಡಗಳಿವೆ. ಇಬ್ಬರೂ ಪೋಷಕರನ್ನು ಕಳೆದುಕೊಂಡ ಮಕ್ಕಳು, ಕಾರಾಗೃಹದಲ್ಲಿರುವ ಪೋಷಕರು ಮಕ್ಕಳು, ಕಾನೂನಿನೊಂದಿಗೆ ಸಂಘರ್ಷಕ್ಕೆ ಒಳಪಟ್ಟಿರುವ ಮಕ್ಕಳು, ಪಿ.ಎಂ ಕೆರ್ಸ್ ಫಾರ್ ಚಿಲ್ಡ್ರನ್ ಯೋಜನೆಯ ಅನುಮೋದಿತ ಮಕ್ಕಳು, ಬಾಲಕಾರ್ಮಿಕ ಸಂತ್ರಸ್ತರು, ಮಕ್ಕಳ ಕಳ್ಳಸಾಗಾಣಿಕೆಗೆ ಒಳಗಾದ ಮಕ್ಕಳು, ಬಾಲ್ಯವಿವಾಹಕ್ಕೊಳಗಾದ ಮಕ್ಕಳು, ಪೋಕ್ಸೋ ಸಂತ್ರಸ್ತ ಮಕ್ಕಳು, ಮಾರಣಾಂತಿಕ ಕಾಯಿಲೆಗೆ ತುತ್ತಾಗಿರುವ ಪೋಷಕರ ಮಕ್ಕಳು, ಬಾಲಸ್ವರಾಜ್ ಪೋರ್ಟಲ್‌ನಲ್ಲಿ ನೋಂದಾಯಿಸಲಾದ ಮಕ್ಕಳು, ಪಾಲನೆ ಮತ್ತು ರಕ್ಷಣೆಯ ಅಗತ್ಯವಿರುವ ಪಾಲನಾ ಸಂಸ್ಥೆಯ ಮಕ್ಕಳು ಹಾಗೂ ಇತರೆ ದುಡಿಯುವ ಪೋಷಕರನ್ನು ಕಳೆದುಕೊಂಡ ವಿಧವೆ, ವಿಚ್ಛೇದಿತ ಮತ್ತು ವಿಸ್ತೃತ ಕುಟುಂಬದ ಮಕ್ಕಳು ಈ ಯೋಜನೆಯ ವ್ಯಾಪ್ತಿಗೆ ಒಳಪಡುವರು.

"ಮಧ್ಯವರ್ತಿಗಳ ಹಗಲು ದರೋಡೆ" ಈ ಸಂದೇಶವನ್ನೇ ಬಂಡವಾಳ ಮಾಡಿಕೊಂಡಿರುವ ಕೆಲವರು ಅಮಾಯಕ ಮುಗ್ಧ ಜನರನ್ನು ಸುಲಿಗೆ ಮಾಡಲು ಶುರು ಮಾಡಿದ್ದಾರೆ. ಒಂದೊಂದು ಅರ್ಜಿಗೆ ಕನಿಷ್ಠ 5 ರಿಂದ 10 ಸಾವಿರ ರೂ. ವಸೂಲಿ ಮಾಡಿಕೊಂಡು ಜನರಿಗೆ ಮೋಸ ಮಾಡುತ್ತಿದ್ದಾರೆ. ಆದರೆ ಈ ಸೌಲಭ್ಯದ ವಾಸ್ತವತೆಯೇ ಬೇರೆ ಇದೆ.

ಈ ಯೋಜನೆಯನ್ನು 2011 ರಲ್ಲಿ ರಾಜ್ಯ ಮಕ್ಕಳ ರಕ್ಷಣಾ ನಿರ್ದೇಶನಾಲಯದ ವ್ಯಾಪ್ತಿಗೆ ತರಲಾಗಿದೆ. ಇದನ್ನು ಸರ್ಕಾರಿ ಅನುದಾನಿತ ಪ್ರಾಯೋಜಕತ್ವ ಯೋಜನೆ ಎಂದು ಕರೆಯಲಾಗುತ್ತದೆ.

ಜನರು ಯಾವುದೇ ರೀತಿಯ ಆಮಿಷಗಳಿಗೆ ಬಲಿಯಾಗಬಾರದು. ಈ ಯೋಜನೆಯ ಬಗ್ಗೆ ಸರಿಯಾಗಿ ಅರಿತುಕೊಳ್ಳಬೇಕು. ಇದು ಕೆಲವು ವಿಶೇಷ ಸಮಸ್ಯೆಗಳುಳ್ಳ ಮಕ್ಕಳಿಗಾಗಿ ಇರುವ ಒಂದು ಉಪಯುಕ್ತ ಯೋಜನೆಯಾಗಿದೆ. ಸಂತ್ರಸ್ತರು ಯಾವುದೇ ಮಧ್ಯವರ್ತಿಯ ಕೈಗೆ ಹಣ ಕೊಟ್ಟು ಮೋಸ ಹೋಗಬಾರದೆಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪುರಾಣ ಶ್ರವಣದಿಂದ ಒತ್ತಡ ಮುಕ್ತಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗ್ರಾಮೀಣ ಸಂಸ್ಕೃತಿಗಳನ್ನು ಯುವಕರು ತಮ್ಮ ಬದುಕಿನಲ್ಲಿ ಅಳವಡಿಸಿಕೊಂಡಾಗ ಮಾತ್ರ ಬದುಕು ಬಂಗಾರವಾಗಲಿದೆ ಎಂದು ಕೇಶವ ಪಾರ್ಕ್‌ನ ಸಿದ್ಧಗಂಗಾಶ್ರೀ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಹಾಗೂ ಪ್ರಥಮ ದರ್ಜೆ ಗುತ್ತಿಗೆದಾರರಾದ ಅಂದಪ್ಪ ಬಿಂಗಿ ಅಭಿಪ್ರಾಯಪಟ್ಟರು.

ಅವರು ನಗರದ ಸಿದ್ಧಗಂಗಾಶ್ರೀ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಪ್ರಥಮ ಬಾರಿಗೆ ಗಣೇಶನ ಪ್ರತಿಷ್ಠಾಪನೆ ಹಾಗೂ ಭಜನಾ ಮಂಗಲ ಕಾರ್ಯಕ್ರಮದ ಅಂಗವಾಗಿ ಹಮ್ಮಿಕೊಂಡಿದ್ದ ಮಹಾ ಅನ್ನಸಂತರ್ಪಣೆ , ಶ್ರಾವಣ ಮಾಸದಲ್ಲಿ ಜರುಗಿದ ಭಜನಾ ಮಂಗಲ ಮೆರವಣಿಗೆಗೆ ಚಾಲನೆ ನೀಡಿ ಮಾತನಾಡಿದರು.

ಇಂದಿನ ಆಧುನಿಕ ಯುಗದಲ್ಲಿ ಉದ್ಯೋಗ, ವ್ಯವಹಾರದಲ್ಲಿ ಒತ್ತಡದ ಜೀವನ ಸಾಗಿಸುವಂತಾಗಿದೆ. ಒತ್ತಡದಿಂದ ಮುಕ್ತರಾಗಲು ಭಜನೆ, ಕೀರ್ತನೆಗಳು, ಪುರಾಣ-ಪ್ರವಚನ, ಭಕ್ತಿ ಸಂಗೀತ ಸಹಕಾರಿಯಾಗಲಿವೆ ಎಂದರು. ಈ ಸಂದರ್ಭದಲ್ಲಿ ಕೇಶವ ಪಾರ್ಕ್‌ನ ಸಿದ್ಧಗಂಗಾಶ್ರೀ ಕ್ಷೇಮಾಭಿವೃದ್ಧಿ ಸಂಘದ ಉಪಾಧ್ಯಕ್ಷ ಬಸವರಾಜ ಹಿರೇಮಠ, ಕಾರ್ಯದರ್ಶಿ ಬಸಯ್ಯ ಇಟಗಿಮಠ, ಖಜಾಂಚಿ ಜಗದೀಶಗೌಡ ಹುಡೇದ, ಪದಾಧಿಕಾರಿಗಳಾದ ಮಂಜುನಾಥ ಅಸೂಟಿ, ಶರಣಪ್ಪ ಪಲ್ಲೇದ, ಸಿದ್ಧಣ್ಣ ಜವಳಿ, ಅಶೋಕಗೌಡ ಪಾಟೀಲ, ಅಶೋಕ ಮಾನ್ವಿ, ಫಕ್ಕೀರೇಶ ಬೆಳವಗಿ, ಮಂಜಯ್ಯ ಹಿರೇಮಠ, ಬಸಯ್ಯ ರುದ್ರಾಪೂರಮಠ, ಚಂದ್ರಕಾಂತ ಮುದಗಲ್, ನಾಗರಾಜ ಶಿರೂರ, ಸಂಗನಬಸಪ್ಪ ಕುಂಬಾರ, ಎಂ.ಸಿ. ಹಿರೇಮಠ, ಎಚ್.ಎನ್. ಡೋಣಿ, ಎಲ್.ಎ. ಕವಲೂರ, ರಮೇಶ ಕುಂಬಾರ, ಮಲ್ಲು ಪಾಟೀಲ, ಚಂದ್ರಶೇಖರ ಹುಬಳಿಮಠ, ಸತೀಶ ಹಡಗಲಿ, ಗುರಪ್ಪ ನಿಡಗುಂದಿ ಮುಂತಾದವರು ಇದ್ದರು.

ವಿವಿಧ ಗ್ರೂಪ್ ಬಿ ಹುದ್ದೆಗಳ ಪರೀಕ್ಷೆಗಳ ಮುಂದೂಡಿಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಲೋಕಸೇವಾ ಆಯೋಗದ ಅಧಿಸೂಚನೆಯನ್ವಯ ಉಳಿಕೆ ಮೂಲವೃಂದದಲ್ಲಿನ ವಿವಿಧ ಗ್ರೂಪ್ ಬಿ ಹುದ್ದೆಗಳಿಗೆ ಸೆಪ್ಟೆಂಬರ್ 14 ಹಾಗೂ 15 ರಂದು ಕನ್ನಡ ಭಾಷಾ ಪರೀಕ್ಷೆ ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸಲು ನಿರ್ಧರಿಸಿ ಅಭ್ಯರ್ಥಿಗಳನ್ನು ಪರೀಕ್ಷಾ ಉಪಕೇಂದ್ರಗಳಿಗೆ ಹಂಚಿಕೆ ಮಾಡಲಾಗಿತ್ತು.

ಈ ಮಧ್ಯೆ ದಿ. 10-09-2024ರ ಕರ್ನಾಟಕ ಸರ್ಕಾರದ ನಡವಳಿಗಳಲ್ಲಿ " ರಾಜ್ಯ ಸಿವಿಲ್ ಸೇವೆಗಳಲ್ಲಿ

ಮಾರುತಿ ದೇವಸ್ಥಾನ ಉದ್ಘಾಟನೆ ಇಂದು

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದ ಬಸವೇಶ್ವರ ನಗರದ ಮಾರುತಿ ದೇವರ ನೂತನ ಮೂರ್ತಿ ಪ್ರತಿಷ್ಠಾಪನೆ ಹಾಗೂ ದೇವಸ್ಥಾನ ಉದ್ಘಾಟನೆ ಕಾರ್ಯಕ್ರಮ ಸೆ.15ರಂದು ಬೆಳಿಗ್ಗೆ 10.30ಕ್ಕೆ ಜರುಗಲಿದೆ.

ದಿವ್ಯ ಸಾನ್ನಿಧ್ಯವನ್ನು ಕೊಪ್ಪಳ ಗವಿಸಿದ್ದೇಶ್ವರ ಗವಿಮಠದ ಅಭಿನವ ಗವಿಸಿದ್ದೇಶ್ವರ ಸ್ವಾಮೀಜಿ ಹಾಗೂ ಮುಳಗುಂದ ಗವಿಮಠದ ಮಲ್ಲಿಕಾರ್ಜುನ ಸ್ವಾಮೀಜಿ, ಸಮ್ಮುಖವನ್ನು ನೀಲಗುಂದ ಗುದ್ನೇಶ್ವರಮಠದ ಪ್ರಭುಲಿಂಗ ದೇವರು ಹಾಗೂ ರಾಜೂರ, ಅಡ್ನೂರ ಪಂಚಾಕ್ಷರ ಶಿವಾಚಾರ್ಯ ಮಾಹಸ್ವಾಮಿಜಿ ವಹಿಸಿಕೊಳ್ಳುವರು.

ಅಧ್ಯಕ್ಷತೆಯನ್ನು ಗುರಣ್ಣಾ ನೀಲಗುಂದ, ಮುಖ್ಯ ಅತಿಥಿಗಳಾಗಿ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ್, ಮಾಜಿ ಶಾಸಕ ಡಿ.ಆರ್. ಪಾಟೀಲ್, ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರುಡಗಿ, ಬಿಜೆಪಿ ಯುವ ಮುಖಂಡ ಶರಣು ಪಾಟೀಲ್, ಗಣ್ಯರಾದ ಶಿವಣ್ಣಾ ನೀಲಗುಂದ, ಎಂ.ಡಿ. ಬಟ್ಟೂರ, ಡಾ. ಎಸ್.ಸಿ. ಚವಡಿ, ಹನುಮಂತಪ್ಪ ಬೀಡನಾಳ, ಕೃಷ್ಣಾ ಕುಷ್ಟಗಿ, ಬಿ.ಶರಣಪ್ಪ, ರಾಮಣ್ಣಾ ಕಮಾಜಿ, ಬಿ.ವಿ. ಸುಂಕಾಪೂರ, ಎಸ್.ಸಿ. ಬಡ್ನಿ, ಶಿವಣ್ಣಾ ಚರಾರಿ, ಮಹೇಶ ದೇಸಾಯಿ, ಪರಶುರಾಮ ವಂಟಕರ್, ಅಶೋಕ ಸೋನಗೋಜಿ, ಕೆ.ಎಲ್. ಕರಿಗೌಡ್ರ, ಸಂಜಯ ನೀಲಗುಂದ, ಹೋನ್ನಪ್ಪ ನೀಲಗುಂದ, ಶಿದ್ದಪ್ಪ ಶಿರಹಟ್ಟಿ, ವೆಂಕಟೇಶ, ಇಮ್ಮಣ್ಣಾ ಶೇಖ, ದ್ಯಾಮಣ್ಣಾ ನೀಲಗುಂದ, ನಾಗರಾಜ ದೇಶಪಾಂಡೆ, ಅಶೋಕ ಹುಣಶಿಮರದ, ಲಿಂಗರಾಜ ಬಟ್ಟೂರ, ಬಸವರಾಜ ಹಾರೋಗೇರಿ, ಜೈ ಮಾರುತಿ ಸಮುದಾಯ ಭವನ ಟ್ರಸ್ಟ್ ಅಧ್ಯಕ್ಷರು ಹಾಗೂ ಸರ್ವ ಸದಸ್ಯರು ಪಾಲ್ಗೊಳ್ಳುವರು ಎಂದು ಪ್ರಕಟಣೆ ತಿಳಿಸಿದೆ.

ಹಿಂದಿ ಹೇರಿಕೆಯನ್ನು ವಿರೋಧಿಸಿ ಕರವೇ ವತಿಯಿಂದ ಪ್ರತಿಭಟನೆ

ಕನ್ನಡವೇ ಆಡಳಿತ ಭಾಷೆಯಾಗಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಕೇಂದ್ರ ಸರಕಾರ ಹಿಂದಿ ಹೇರಿಕೆಯನ್ನು ಕೈಬಿಟ್ಟು, ಸಂವಿಧಾನದ 8ನೇ ಪರಿಚ್ಛೇದದಲ್ಲಿ ಉಲ್ಲೇಖಿಸಿರುವ 22 ಭಾಷೆಗಳನ್ನೂ ಅಧಿಕೃತ ಆಡಳಿತ ಭಾಷೆಯನ್ನಾಗಿ ಮಾಡಿ, ಈ ದೇಶದ ಬಹುತ್ವವನ್ನು, ಸೌರ್ವಭೌಮತೆಯನ್ನು ಕಾಪಾಡಬೇಕು. ದೇಶದ ಎಲ್ಲ ಭಾಷೆಗಳೂ ಸಮಾನ ಎಂದು ಸಾರಬೇಕು. ಕರ್ನಾಟಕದಲ್ಲಿ ಕಾರ್ಯನಿರ್ವಹಿಸುವ ಎಲ್ಲ ಕೇಂದ್ರ ಸರಕಾರಿ ಇಲಾಖೆಗಳು, ಉದ್ಯಮಗಳಲ್ಲಿ ಕನ್ನಡವೇ ಆಡಳಿತ ಭಾಷೆಯಾಗಬೇಕು. ಕರ್ನಾಟಕದಲ್ಲಿ ತ್ರಿಭಾಷಾ ಸೂತ್ರ ಕೈಬಿಟ್ಟು, ಹಿಂದಿ ಕಡ್ಡಾಯ ಕಲಿಕೆ ರದ್ದುಗೊಳಿಸಬೇಕು ಎಂದು ಕರವೇ ಕಾರ್ಯಕರ್ತರು ಒತ್ತಾಯಿಸಿದರು.

ಕೇಂದ್ರ ಸರಕಾರ ಬಲವಂತವಾಗಿ ಹಿಂದಿ ಭಾಷೆಯನ್ನು ಹಿಂದಿಯೇತರ ಭಾಷೆ ಬಳಸುವ ರಾಜ್ಯಗಳ ಮೇಲೆ ಹೇರಿಕೆ ಮಾಡಿ ಹಿಂದಿಯನ್ನು ಆಡಳಿತ ಭಾಷೆಯನ್ನಾಗಿ ಮಾಡುವ ಹುನ್ನಾರ ನಡೆಸಿದೆ ಎಂದು ಆರೋಪಿಸಿ ಕರವೇ (ನಾರಾಯಣಗೌಡ ಬಣ) ಕಾರ್ಯಕರ್ತರು

ಶನಿವಾರ ಇಲ್ಲಿನ ಮಹಾತ್ಮ ಗಾಂಧಿ ವೃತ್ತದಲ್ಲಿ ಪ್ರತಿಭಟನೆ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಪ್ರತಿಭಟನಾಕಾರರು, ಸಂವಿಧಾನದ 8ನೇ ಪರಿಚ್ಛೇದದಲ್ಲಿರುವ ಎಲ್ಲ 22 ಭಾಷೆಗಳೂ ರಾಷ್ಟ್ರಭಾಷೆಗಳೇ ಆಗಿವೆ. ಈ ಪರಿಚ್ಛೇದದಲ್ಲಿ ಒಳಗೊಳ್ಳದ ಅನೇಕ ಭಾಷೆಗಳು ನಮ್ಮ ದೇಶದಲ್ಲಿವೆ. ಇಂಥ ಸಮಯದಲ್ಲಿ ಹಿಂದಿಯನ್ನು ನಮ್ಮ ರಾಷ್ಟ್ರಭಾಷೆಯನ್ನಾಗಿ ಮಾಡುವ ಪ್ರಸ್ತಾಪವನ್ನು ಸಂವಿಧಾನ ಕರಡು ರಚನೆ ಸಂದರ್ಭದಲ್ಲಿಯೇ ತಿರಸ್ಕರಿಸಲಾಗಿದೆ. ಆದರೂ ಕೇಂದ್ರ ಸರಕಾರ ಹಿಂದಿ ದಿವಸ್ ಆಚರಣೆ ಮೂಲಕ ಹಿಂದಿಯೇತರ ಭಾಷೆ ಮಾತನಾಡುವ ರಾಜ್ಯಗಳ ಮೇಲೆ ಬಲವಂತವಾಗಿ ಹಿಂದಿ ಹೇರಿಕೆ ಮಾಡುವ ಹುನ್ನಾರ ನಡೆಸಿದೆ ಎಂದು ಆರೋಪಿಸಿದರು.

ಪ್ರತಿಭಟನೆಯಲ್ಲಿ ಕರವೇ ಜಿಲ್ಲಾ ಪ್ರಧಾನ ಕಾರ್ಯದರ್ಶಿ ನಿಂಗನಗೌಡ ಮಾಲಿಪಾಟೀಲ, ಆಶಾ ಜೂಲಗುಡ್ಡ, ಜಿಲ್ಲಾ ವಕ್ತಾರ ವೀರಪಾಕ್ಷಪ್ಪ ಹಿತ್ತಲಮನಿ, ಮುತ್ತಣ್ಣ ಚೌಡಣ್ಣವರ, ವಿನಾಯಕ ಬದಿ, ನಾಗರಾಜ ಅಣ್ಣಿಗೇರಿ, ಯಲ್ಲಪ್ಪ ಬೋವಿ, ದಾವಲಸಾಬವ ತಹಸೀಲ್ದಾರ್, ತೌಸಿಫ್ ಢಾಲಾಯತ್, ಸಲೀಂ ಶಿರವಾರ, ಸಿರಾಜ ಹೊಸಮನಿ, ಭರಮಪ್ಪ ಕಿಲಾರಿ, ಹನುಮಂತ ಪೂಜಾರ, ಶರಣಪ್ಪ ಪುರ್ತಗೇರಿ ಮುಂತಾದವರು ಉಪಸ್ಥಿತರಿದ್ದರು.

> ಭಾರತ ಒಕ್ಕೂಟ ವ್ಯವಸ್ಥೆಯ ದೇಶ. ಒಂದು ಒಕ್ಕೂಟ ರಾಷ್ಟ್ರವಾಗಿ ಎಲ್ಲ ಪ್ರಾಂತ್ಯಗಳ ಭಾಷೆ, ಸಂಸ್ಕೃತಿ, ಇತಿಹಾಸ, ಆಚಾರ-ವಿಚಾರಗಳನ್ನು ಗೌರವಿಸುವ ಹೊಣೆ ಒಕ್ಕೂಟ ವ್ಯವಸ್ಥೆಗೆ ಸೇರಿದ್ದು. ವಿವಿಧತೆಯಲ್ಲಿ ಏಕತೆ ಎಂಬುದು ಒಕ್ಕೂಟದ ಮೂಲಮಂತ್ರ. ಈ ಒಗ್ಗಟ್ಟನ್ನು ಮುರಿಯುವ ಕೆಲಸವನ್ನು ಹಿಂದಿ ಸಾಮ್ರಾಜ್ಯಶಾಹಿಗಳು ನಿರಂತರವಾಗಿ ನಡೆಸುತ್ತಲೇ ಇದ್ದಾರೆ. ಇದಕ್ಕೆ ಕರ್ನಾಟಕ ರಕ್ಷಣಾ ವೇದಿಕೆ ಯಾವತ್ತಿಗೂ ಅವಕಾಶ ಕೊಡುವುದಿಲ್ಲ ಎಂದು ಪ್ರತಿಭಟನಾಕಾರರು ಎಚ್ಚರಿಕೆ ನೀಡಿದರು.

ಆರೋಗ್ಯದ ಬಗ್ಗೆ ಕಾಳಜಿಯಿರಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಲಕ್ಷ್ಮೀ ಫಿಜಿಯೋಥೆರಪಿ ಕ್ಲಿನಿಕ್ ಲಾಯನ್ಸ್ ಕ್ಲಬ್ ಗದಗ-ಬೆಟಗೇರಿ ಸಂಸ್ಥೆಯು ವಿಶ್ವ ಫಿಜಿಯೋಥೆರಪಿ ದಿನಾಚರಣೆಯ ಅಂಗವಾಗಿ ಫಿಜಿಯೋಥೆರಪಿ ಉಚಿತ ತಪಾಸಣಾ ಶಿಬಿರವನ್ನು ಏರ್ಪಡಿಸಿತ್ತು.

ಡಾ. ನಂದೀಶ್ ವಾಲೀಕಾರ, ಡಾ. ಸೌಮ್ಯ ಭದ್ರಾಪೂರ, ಪ್ರೀತಿ ಕಟ್ಟಿ, ಯಶೋಧಾ ಪವನ್, ದೀಪಾ, ವಿನೋದ ಮತ್ತು ತಂಡದವರು ಶಿಬಿರವನ್ನು ಯಶಸ್ವಿಯಾಗಿ ನಡೆಸಿಕೊಟ್ಟರು. ಈ ಸಂದರ್ಭದಲ್ಲಿ ಮಾತನಾಡಿದ ಡಾ. ನಂದೀಶ್ ವಾಲೀಕಾರ, ನಾವಿಂದು ಆರೋಗ್ಯದ ಬಗ್ಗೆ ಕಾಳಜಿ ವಹಿಸಬೇಕು. ಕನಿಷ್ಠ 6 ತಿಂಗಳಿಗೊಮ್ಮೆ ತಜ್ಞ ವೈದ್ಯರಿಂದ ಆರೋಗ್ಯ ತಪಾಸಣೆ ಮಾಡಿಸಿಕೊಂಡು ವೈದ್ಯರ ಸಲಹೆ ಪಡೆಯಬೇಕೆಂದರು.

ಕ್ಲಬ್ ಅಧ್ಯಕ್ಷ ನಿತೀಶ್ ಸಾಲಿ ಮಾತನಾಡಿ, ಇಂದಿನ ಆಧುನಿಕ ದಿನಗಳಲ್ಲಿ ನಾವೆಲ್ಲರೂ ಒತ್ತಡದ ಜೀವನ ನಡೆಸುತ್ತಿದ್ದೇವೆ. ಆರೋಗ್ಯದ ಬಗ್ಗೆ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವದು ಅವಶ್ಯವಿದೆ. ಹಿತಮಿತವಾದ ಆಹಾರ ಸೇವನೆ, ಲಘು ವ್ಯಾಯಾಮ, ವಾಯು ವಿಹಾರ, ಯೋಗ-ಧ್ಯಾನ, ಸಂಗೀತ ಆಲಿಸುವಿಕೆಯಿಂದ ಒತ್ತಡವನ್ನು ನಿಗ್ರಹಿಸಿಕೊಳ್ಳಬಹುದು ಎಂದರು.

ಸುಮಾರು 20ಕ್ಕೂ ಹೆಚ್ಚು ಜನರು ಶಿಬಿರದ ಪ್ರಯೋಜನ ಪಡೆದುಕೊಂಡರು. ಈ ಸಂದರ್ಭದಲ್ಲಿ ಲಯನ್ ಲೇಡೀಸ್ ಕ್ಲಬ್‌ನ ಅಧ್ಯಕ್ಷೆ ಅನುರಾಧಾ ನಿತೀಶ್ ಸಾಲಿ, ಲಯನ್ಸ್ ಕ್ಲಬ್‌ನ ಖಜಾಂಚಿ ಲಿಂಗರಾಜ ತೋಟದ, ಪ್ರವೀಣ ವಾರಕರ, ದತ್ತು ಬೇವಿನಕಟ್ಟಿ, ವಿನಾಯಕ ವಜ್ರೇಶ್ವರಿ, ನಿತೀಶ್ ಬಾರ್ಸಿ, ಎಂ.ಕೆ. ಕುಷ್ಟಗಿ, ಅರವಿಂದ ಪಟೇಲ್ ಮುಂತಾದವರಿದ್ದರು.

ಇನ್ನರ್ ವ್ಹೀಲ್ ಸಂಸ್ಥೆಯಿಂದ ವಧು ಸೌಂದರ್ಯ ವರ್ಧಕ ಶಿಬಿರ

ಸೌಂದರ್ಯವರ್ಧಕ ವೃತ್ತಿ ಬೇಡಿಕೆ ಹೊಂದಿದೆ

■ ವಿಜಯಸಾಕ್ಷಿ ಸುದ್ದಿ, ಗದಗ

ಇನ್ನರ್ ವ್ಹೀಲ್ ಸಂಸ್ಥೆ ಗದಗ-ಬೆಟಗೇರಿ ಹಾಗೂ ಕೆಎಲ್ಇ ಸೊಸೈಟಿಯ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದ ವತಿಯಿಂದ ಮಹಿಳೆಯರಿಗಾಗಿ ಎರಡು ದಿನಗಳ ಕೇಶ ವಿನ್ಯಾಸ ಹಾಗೂ ವಧು ಸೌಂದರ್ಯವರ್ಧಕ ಶಿಬಿರವನ್ನು ಏರ್ಪಡಿಸಲಾಗಿತ್ತು.

ಈ ಕಾರ್ಯಕ್ರಮವನ್ನು ಸಂಸ್ಥೆಯ ಅಧ್ಯಕ್ಷರಾದ ನಾಗರತ್ನ ಮಾರನಬಸರಿಯವರು ಉದ್ಘಾಟಿಸಿ ಮಾತನಾಡಿ, ಮಹಿಳೆ ಆರ್ಥಿಕವಾಗಿ ಸಬಲೀಕರಣಗೊಂಡರೆ ಆಕೆ ಸಮಾಜದ ಮುಖ್ಯವಾಹಿನಿಗೆ ಬಂದಂತಾಗುತ್ತದೆ. ಇತ್ತೀಚಿನ ದಿನಗಳಲ್ಲಿ ಪ್ರತಿಯೊಬ್ಬ ಮಹಿಳೆಯೂ ತನ್ನ ಸೌಂದರ್ಯದ ಬಗ್ಗೆ ಅತ್ಯಂತ ಕಾಳಜಿ ವಹಿಸುತ್ತಿರುವುದರಿಂದ ಮಹಿಳಾ ಸೌಂದರ್ಯವರ್ಧಕ ವೃತ್ತಿಯು ಬಹು ಬೇಡಿಕೆಯಲ್ಲಿದೆ. ಈ ವೃತ್ತಿಯು ಗೌರವದೊಂದಿಗೆ ಉತ್ತಮ ಆದಯವನ್ನು ನೀಡುತ್ತಿದ್ದು, ಮಹಿಳೆಯರು ಸಮರ್ಥವಾಗಿ ನಿಭಾಯಿಸಬಲ್ಲ ಕಾಯಕವಾಗಿದೆಯೆಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕೆಎಲ್ಇ ಸೊಸೈಟಿಯ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಎ.ಕೆ. ವ್ಹಠ ಮಾತನಾಡಿ, ಮಹಿಳೆಯರು ಸಾಂಪ್ರದಾಯಕ ವಿದ್ಯಾಭ್ಯಾಸದ ಜೊತೆಗೆ ವಿವಿಧ ಕಲೆ ಹಾಗೂ ಕೌಶಲ್ಯಗಳನ್ನು ಕರಗತ ಮಾಡಿಕೊಂಡರೆ ತಮ್ಮ ಉಜ್ವಲವಾದ ಭವಿಷ್ಯಕ್ಕೆ ಸಹಾಯ ನೀಡಲಿದೆಯೆಂದರು.

ಪ್ರೇರಣಾ ಅಕಾಡೆಮಿಯ ಶೋಭಾ ಹಾಗೂ ಚೈತ್ರಾ ಅರುಣಗುಳಗೌಡರ ಸೌಂದರ್ಯ ವರ್ಧಕ ವೃತ್ತಿಯಲ್ಲಿ ಬಳಸುವ ವಿವಿಧ ವಸ್ತುಗಳ ಪರಿಚಯ ಹಾಗೂ ವಧುವಿಗೆ ಶೃಂಗಾರ ಮಾಡುವ ಕಲೆಯನ್ನು ಪ್ರಾತ್ಯಕ್ಷಿಕೆಯ ಮೂಲಕ ವಿವರಿಸಿ, ಚರ್ಮಕ್ಕೆ ಹಾನಿ ಮಾಡುವ ಯಾವುದೇ ವಸ್ತುಗಳನ್ನು ಬಳಸಬಾರದೆಂದು ಸಲಹೆ ನೀಡಿದರು. ಸಂಸ್ಥೆಯ ಕಾರ್ಯದರ್ಶಿಗಳಾದ ವೀಣಾ ತಿರ್ಲಾಪೂರ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

ಈ ಸಂದರ್ಭದಲ್ಲಿ ಸಂಸ್ಥೆಯ ಐಎಸ್‌ಓ ಪುಷ್ಪಾ ಭಂಡಾರಿ, ಸಾಗರಿಕ ಅಕ್ಕಿ, ಅಶ್ವಿನಿ ಜಗತಾಪ, ಪ್ರತಿಭಾ ಭದ್ರಶೆಟ್ಟಿ, ಶಿವಲೀಲಾ ಅಕ್ಕಿ, ಜಂಟಿ ಕಾರ್ಯದರ್ಶಿ ಜ್ಯೋತಿ ದಾನಪ್ಪಗೌಡರ್, ಪವಿತ್ರಾ ಬಿರಾದಾರ್, ಪ್ರೇಮಾ ಹಂದಿಗೋಳ್, ಶೀವಲೀಲಾ ಅಕ್ಕಿ, ಶುಭಾ ಕುಂದಗೋಳ, ಮಂಜುಳಾ ಅಕ್ಕಿ, ಜಯಶ್ರೀ ಪಾಟೀಲ, ಸುವರ್ಣ ಮದರಿಮಠ, ಸಂಗೀತ ಪಟ್ಟಣಶೆಟ್ಟಿ ಹಾಗೂ ಕಾಲೇಜಿನ ಸಿಬ್ಬಂದಿಗಳು, ವಿದ್ಯಾರ್ಥಿಗಳು ಕಾರ್ಯಾಗಾರದಲ್ಲಿ ಉಪಸ್ಥಿತರಿದ್ದರು.

ಸ್ವಚ್ಛತಾ ಹೀ ಸೇವಾ ಪಾಕ್ಷಿಕ ಪರಿಣಾಮಕಾರಿಯಾಗಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಸ್ವಚ್ಛತಾ ಹೀ ಸೇವಾ ಪಾಕ್ಷಿಕ ವಿಶೇಷ ಆಂದೋಲನಾ ಕಾರ್ಯಕ್ರಮವನ್ನು ತಾಲೂಕಿನಾದ್ಯಂತ ಸೆಪ್ಟಂಬರ್ 17ರಿಂದ ಅಕ್ಟೋಬರ್ 2ರವರೆಗೆ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಪಂಚಾಯತ್ ಸಿಬ್ಬಂದಿಗಳು ಮುಂದಾಗಬೇಕು ಎಂದು ಕಾರ್ಯ ನಿರ್ವಾಹಕ ಅಧಿಕಾರಿ ಮಲ್ಲಯ್ಯ ಕೊರವನವರ ಹೇಳಿದರು.

ಕೇಂದ್ರ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಜಲಶಕ್ತಿ ಮಂತ್ರಾಲಯ ಹಾಗೂ ಕೇಂದ್ರ ನಗರ ವಸತಿ ವ್ಯವಹಾರಗಳ ಸಚಿವಾಲಯದ ವತಿಯಿಂದ ಸೆ.17ರಿಂದ ಅ.2ರವರೆಗೆ ಸ್ವಚ್ಛತಾ ಸೇವಾ ಪಾಕ್ಷಿಕ ಕಾರ್ಯಕ್ರಮವನ್ನು ಸ್ವಭಾವ ಸ್ವಚ್ಛತಾ, ಸಂಸ್ಕಾರ ಸ್ವಚ್ಛತಾ ಎಂಬ ಧ್ಯೇಯ ವಾಕ್ಯದೊಂದಿಗೆ ಹಮ್ಮಿಕೊಳ್ಳಲಾಗುವುದು ಎಂದರು.

ಕಾರ್ಯಕ್ರಮದ ಅಂಗವಾಗಿ ಪ್ರತಿಜ್ಞಾ ವಿಧಿ, ಮಾನವ ಸರಪಳಿ, ಗಿಡ ನೆಡುವುದು, ಅರಿವು ಕಾರ್ಯಾಗಾರ, ಜಾಥಾ ಆಯೋಜನೆ ಸೇರಿದಂತೆ ಮತ್ತಿತರ ಸ್ವಚ್ಛತಾ ಕಾರ್ಯಕ್ರಮಗಳನ್ನು ಆಯೋಜಿಸಲು ಕ್ರಮ ಕೈಗೊಳ್ಳಬೇಕು ಎಂದರು.

ಸಭೆಯಲ್ಲಿ ತಾಲೂಕು ಪಂಚಾಯತ್ ವ್ಯಾಪ್ತಿಯ ಪಿ.ಡಿ.ಒಗಳು ಹಾಗೂ ಪಂಚಾಯತ್ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಲಕ್ಕುಂಡಿ ಸಹಕಾರಿ ಸಂಘಕ್ಕೆ ಪ್ರಶಸ್ತಿ

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿಯ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘ ನಿಯಮಿತ ನಂ-2ಕ್ಕೆ 2022-23ನೇ ಸಾಲಿನ ಉತ್ತಮ ವ್ಯವಹಾರ ಮಾಡಿದ್ದಕ್ಕಾಗಿ ಧಾರವಾಡ ಕೆ.ಸಿ.ಸಿ ಬ್ಯಾಂಕ ಪ್ರಶಸ್ತಿಪತ್ರ ನೀಡಿ ಗೌರವಿಸಿತು.

ಧಾರವಾಡ ಕೆ.ಸಿ.ಸಿ ಬ್ಯಾಂಕ್‌ನ 108ನೇ ವಾರ್ಷಿಕ ಮಹಾಸಭೆಯ ಕಾರ್ಯಕ್ರಮದಲ್ಲಿ ಕೆ.ಸಿ.ಸಿ. ಬ್ಯಾಂಕ್ ಅಧ್ಯಕ್ಷ ಶಿವಕುಮಾರಗೌಡ ಪಾಟೀಲ ಹಾಗೂ ನಿರ್ದೇಶಕರು 10 ಸಾವಿರ ರೂ ಬಹುಮಾನದ ಚೆಕ್ ಮತ್ತು ಪ್ರಶಸ್ತಿಪತ್ರದೊಂದಿಗೆ ಸಂಘದ ಅಧ್ಯಕ್ಷ ರುದ್ರಪ್ಪ ಮುಸ್ಕಿನಭಾವಿ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿ.ಬಿ. ಬೆನಕಲ್ಲ ಅವರನ್ನು ಸನ್ಮಾನಿಸಿ ಗೌರವಿಸಿದರು.

ಸಂಘವು ಗದಗ ತಾಲೂಕಿನಲ್ಲಿ 60 ಸಹಕಾರಿ ಸಂಘಗಳಲ್ಲಿಯೇ ಉತ್ತಮ ಕಾರ್ಯ ನಿರ್ವಹಣೆ ಮಾಡಿದೆ. ಸಂಘವು 2023-24ನೇ ಸಾಲಿನಲ್ಲಿ 444 ಸದಸ್ಯರನ್ನು ಹೊಂದಿದ್ದು, 13.28 ಲಕ್ಷ ರೂ ಷೇರನ್ನು ಪಡೆದುಕೊಂಡಿದೆ. ಸದಸ್ಯರಿಗೆ 72.58 ಲಕ್ಷ ರೂಗಳ ಸಾಲವನ್ನು ನೀಡಿದ್ದು, 2.54 ಲಕ್ಷ ರೂ.ಗಳ ಲಾಭವನ್ನು ಪಡೆದುಕೊಂಡಿದೆ. ಸಂಘದ ನಿರ್ದೇಶಕ ಮಂಡಳಿ ಸಿಬ್ಬಂದಿ ವರ್ಗಗಳ ಶ್ರಮದಿಂದ ಉತ್ತಮ ವ್ಯವಹಾರವನ್ನು ಹೊಂದಿದ್ದರಿಂದ ಕೆ.ಸಿ.ಸಿ ಬ್ಯಾಂಕಿನ ಪ್ರಶಸ್ತಿ ಪುರಸ್ಕಾರಕ್ಕೆ ಆಯ್ಕೆ ಮಾಡಲಾಗಿದೆ ಎಂದು ಕೆ.ಸಿ.ಸಿ ಬ್ಯಾಂಕ್ ತನ್ನ ಪ್ರಕಟಣೆಯಲ್ಲಿ ತಿಳಿಸಿದೆ.

ರಕ್ತದಾನದಿಂದ ಉತ್ತಮ ಆರೋಗ್ಯ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರಕ್ತದಾನ ಮಾಡುವುದರ ಮೂಲಕ ಮಾನವೀಯತೆ ಮೆರೆಯಬೇಕು. ಇದಕ್ಕೆ ಯುವ ಸಮೂಹ ಸೇರಿದಂತೆ ಪ್ರತಿಯೊಬ್ಬರ ಸಹಕಾರ ಅಗತ್ಯ ಎಂದು ಡಾ. ಬಿ.ಜೆ. ಅಂಗಡಿ ಅಭಿಪ್ರಾಯಪಟ್ಟರು.

ಅವರು ತಾಲೂಕಿನ ಸೂರಣಗಿ ಗ್ರಾಮದ ನವಚೇತನ ಯುವಕ ಮಂಡಳದ 20ನೇ ವರ್ಷದ ಗಣೇಶೋತ್ಸವ ಹಾಗೂ 8ನೇ ಸ್ವಯಂಪ್ರೇರಿತ ರಕ್ತದಾನ ಶಿಬಿರ ಉದ್ಘಾಟಿಸಿ ಮಾತನಾಡಿದರು.

ರಕ್ತದಾನ ಮಾಡುವುದರಿಂದ ಮಾನವೀಯ ಮೌಲ್ಯಗಳಿಗೆ ನ್ಯಾಯ ಒದಗಿಸಿದಂತಾಗುತ್ತದೆ ರಕ್ತದಾನ ಮಾಡುವುದು ಒಂದು ರೀತಿಯ ಸಾಮಾಜಿಕ ಸೇವೆ. ಅರೋಗ್ಯವಚಿತರಾದ ಪ್ರತಿಯೊಬ್ಬರೂ ರಕ್ತದಾನ

ಮಾಡಿ ಎಂದು ಸಲಹೆ ನೀಡಿದರು.

ತಾ.ಪಂ ಮಾಜಿ ಸದಸ್ಯ ಕೊಟೇಪ್ಪ ವರ್ದಿ, ತಾಲೂಕಾ ವೈದ್ಯಾಧಿಕಾರಿ ಡಾ. ಸುಭಾಸ ದಾಯಗೊಂಡ ಮಾತನಾಡಿದರು.

ಸುಮಾರು 50ಕ್ಕೂ ಅಧಿಕ ಜನರು ಸ್ವಯಂಪ್ರೇರಿತರಾಗಿ ರಕ್ತದಾನ ಮಾಡಿದರು. ಗ್ರಾ.ಪಂ ಅಧ್ಯಕ್ಷೆ ಚನ್ನವ್ವ ಕಳ್ಳಿಹಾಳ ಅಧ್ಯಕ್ಷತೆ ವಹಿಸಿದ್ದರು. ಚನ್ನಮ್ಮ ಹಿರೇಮಠ, ಡಾ. ಎನ್.ವಿ. ಹೆಬಸೂರ, ದೀಪಾ ಕಾಶಿಕೋವಿ, ರಾಘವೇಂದ್ರ ಗುತ್ತೇಮ್ಮನವರ, ಹುಸೇನಸಾಬ ಕೊಲ್ಕಾರ, ಕುಮಾರ ಬೆಟಗೇರಿ, ಸಚಿನ ಮೇಲ್ಮುರಿ, ಕೃಷ್ಣ ಲಮಾಣಿ, ಡಾ. ಮಲ್ಲಿಕಾರ್ಜುನ ಪಟ್ಟಣಶೆಟ್ಟಿ, ಡಾ. ದಿವ್ಯ, ರಕ್ತನಿಧಿ ಕೇಂದ್ರದ ಮುಖ್ಯಸ್ಥ ಎಸ್.ಬಿ. ಪಾಟೀಲ, ಡಾ.ಮಂಜುನಾಥ ಗುಡಿಮನಿ, ಶಕೀಲಬಾನು ಮುರ್ತುಜನವರ, ಎಫ್.ಬಿ. ಹೂಗಾರ, ಜಿ.ಎಸ್. ಮೇಲಿನಮನಿ, ವೆಂಕಟೇಶ ಟೆಂಕಪ್ಪನವರ, ಜಯಶ್ರೀ ಲಕ್ಕುಂಡಿ, ಎಚ್.ಎಚ್. ಕುಡಚಿ, ಎಸ್.ಎಸ್. ಗಂಗೂರ, ಸಿಂಧೂ ವಿ., ಎಸ್.ಪುಷ್ಪಾ, ಸುಜಾತಾ ನಡವಲಕೇರಿ, ಕಿರಣ ಮೆಗಲಮನಿ ಸೇರಿದಂತೆ ಸೂರಣಗಿ ಪ್ರಾಥಮಿಕ ಆರೋಗ್ಯ ಕೇಂದ್ರದ ಸಿಬ್ಬಂದಿಗಳು, ಸಾರ್ವಜನಿಕರು ಹಾಜರಿದ್ದರು. ಶರಣಪ್ಪ ಮಾಸ್ತಮ್ಮನವರ, ನಾಗರಾಜ ಪೂಜಾರ, ಬಸವರಾಜ ದುರ್ಗದ ನಿರೂಪಿಸಿದರು.

ಎಸ್‌ಎಸ್‌ಕೆ ಸಮಾಜದಿಂದ ಸಂಪ್ರದಾಯಬದ್ಧವಾಗಿ ಗಣೇಶ ಮೂರ